MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 217 | ಗುರುವಾರ : 12-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 217 | THURSDAY : 12-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

### ರಾಯಚೂರಿನ ಹಟ್ಟಿಗೆ ಭೇಟಿ ನೀಡಿದ ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿ

## ಹಟ್ಟಿ ಗೋಲ್ಡ್ ಮೈನ್ ಕಂಪನಿಯ ನೌಕರರ ಸುರಕ್ಷತೆಗೆ ಗಮನ ಹರಿಸಿ: ಟಿ.ಎ.ಶರವಣ ನಿರ್ದೇಶನ

ಯುವ ಮಾರ್ಗ ಸುದ್ದಿ

**ರಾಯಚೂರು(ಹಟ್ಟಿ),ಜೂ.11–**ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷರಾದ ಟಿ.ಎ.ಶರವಣ ಹಾಗೂ ಸಮಿತಿಯ ಸದಸ್ಯರ ತಂಡವು ಬುಧವಾರ ಲಿಂಗಸುಗೂರು ತಾಲೂಕಿನ ಹಟ್ಟಿ ಗೋಲ್ಡ್ ಮೈನ್ ಕಂಪನಿಗೆ ಭೇಟಿ ನೀಡಿತು.

ಪೂರ್ವ ನಿಗದಿಯಂತೆ ತಂಡವು ಮೊದಲಿಗೆ ಹಟ್ಟಿ ಚಿನ್ನದ ಗಣಿ ವೀಕ್ಷಣೆಯನ್ನು ನಡೆಸಿತು. ಬರೋಬ್ಬರಿ ಒಂದು ಕಿ.ಮೀ ಆಳದಷ್ಟು ಗಣಿಗಿಳಿದ ಶಾಸಕರು ಚಿನ್ನ ಉತ್ಪಾದನೆಯ ಪರಿಯ ಕಂಡು ಬೆರಗಾದರು. ಬಳಿಕ ಚಿನ್ನದ ಗಣಿಯ ಲೋಹ ವಿಭಾಗಕ್ಕೆ ತೆರಳಿ ಖುದ್ದು ವೀಕ್ಷಣೆ ನಡೆಸಿದರು.

ಲೋಹ ವಿಭಾಗದ ಉಪಪ್ರಧಾನ ವ್ಯವಸ್ಥಾಪಕರಾದ ವಿಧಾತ್ರಿ ಅವರು, ಚಿನ್ನ ಸಂಸ್ಕರಣೆಯ ವಿಧಿವಿಧಾನಗಳ ಬಗ್ಗೆ ಶಾಸಕರಿಗೆ ಮಾಹಿತಿ ನೀಡಿದರು.

ಬಳಿಕ ಕಂಪನಿಯ ಸಭಾಂಗಣದಲ್ಲಿ ಸಭೆ ನಡೆಯಿತು. ಈ ವೇಳೆ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಭರವಸೆಗಳ ಸಂಖ್ಯೆ:7622 ಮತ್ತು 7387ಕ್ಕೆ ಸಂಬಂಧಿಸಿದಂತೆ ವಿವರಣೆ ಪಡೆದುಕೊಂಡರು.


ಕಂಪನಿಯ ನೌಕರರೊಬ್ಬರು ಮೃತಪಟ್ಟ ವಿಷಯದ ಬಗ್ಗೆ ಅಧ್ಯಕ್ಷರು ವಿವರಣೆ ಕೇಳಿದರು.

ಕಂಪನಿಯಲ್ಲಿ ಪ್ರಗತಿ ಕಾರ್ಯ ನಡೆಯುವ ವೇಳೆ ಮಷೀನದಲ್ಲಿದ್ದ ಒಬ್ಬ ವ್ಯಕ್ತಿಯು ಪ್ರಾಣ ಕಳೆದುಕೊಂಡರು. ಇವರ ಕುಟುಂಬದವರಿಗೆ ಈಗಾಗಲೇ 5 ಲಕ್ಷ ರೂ ಪರಿಹಾರ ನೀಡಿದೆ. ಮೃತನ ಪತ್ನಿಗೆ ಮ್ಯಾನೇಜರ್ ದರ್ಜೆಯ ಹುದ್ದೆಯ ಕೆಲಸ ಕೊಡಲು ಕ್ರಮವಹಿಸಲಾಗುತ್ತಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಈ ವೇಳೆ ಸಮಿತಿಯ ಅಧ್ಯಕ್ಷರಾದ ಟಿ.ಎ.ಶರವಣ ಅವರು ಮಾತನಾಡಿ, ಇನ್ಮುಂದೆ ಇಂತಹ ಕಹಿ ಘಟನೆಗಳು ಮರುಕಳಿಸದ ಹಾಗೆ ಹಟ್ಟಿ ಗೋಲ್ಡ್ ಮೈನ್ ಕಂಪನಿ ನಿಯಮಿತದ ನೌಕರರ ಜೀವ ಸುರಕ್ಷತೆಗೆ ಗಮನ ಹರಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

**25 ಲಕ್ಷಕ್ಕೆ ಏರಿಸಿ:** ಕಂಪನಿಯಲ್ಲಿ ಕೆಲಸದ ವೇಳೆ ಪ್ರಾಣ ಕಳೆದುಕೊಂಡ ನೌಕರರ ಕುಟುಂಬದ ಸಂತ್ರಸ್ತರಿಗೆ ಇನ್ಮುಂದೆ ಕನಿಷ್ಠ 25 ಲಕ್ಷ ಪರಿಹಾರ ಧನ ನೀಡಲು ಕರ್ನಾಟಕ ವಿಧಾನ ಪರಿಷತ್ತಿನ ಭರವಸೆಗಳ ಸಮಿತಿ ಸೂಚನೆ ನೀಡುತ್ತಿದೆ. ಸಭೆಯಲ್ಲಿ ಚರ್ಚೆಯಾಗಿದೆ ಎಂದು ಉಲ್ಲೇಖಿಸಿ 25 ಲಕ್ಷ ರೂ ಕೊಡಲು ಬೋರ್ಡಿಗೆ ಶಿಫಾರಸ್ಸು ಮಾಡಲು ಕ್ರಮವಹಿಸಬೇಕು ಎಂದು ಸಮಿತಿಯ ಸದಸ್ಯರು ಇದೆ ವೇಳೆ ಸೂಚನೆ ನೀಡಿದರು.


**ಹಾಸ್ಪಿಟಲ್ ಮೇಲ್ದರ್ಜೇಗೇರಿಸಿ:** ಕಂಪನಿಯ ಆವರಣದಲ್ಲಿನ ಹಾಸ್ಪಿಟಲನ ಸದ್ಯದ ಪರಿಸ್ಥಿತಿ ಸರಿಯಿಲ್ಲ. ಇದು ಬದಲಾಗಬೇಕು. ನೌಕರರಿಗೆ ಎಲ್ಲಾ ರೀತಿಯ ಚಿಕಿತ್ಸೆ ಸಿಗುವ ನಿಟ್ಟಿನಲ್ಲಿ ಈಗಿರುವ ಆಸ್ಪತ್ರೆಯನ್ನು ಮೇಲ್ದರ್ಗೇರಿಸಬೇಕು 2ನೇಪುಟಕ್ಕೆ

## ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಯಾಗಲಿ: ಶಾಸಕರಾದ ಬಸನಗೌಡ ದದ್ದಲ್

ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.11–** ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಮಹತ್ವದ ಬುಡಕಟ್ಟು ಉತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಜೂನ್ 23 ರಂದು ರಾಯಚೂರ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಕಾರ್ಯಕ್ರಮದಲ್ಲಿ ಯಾವುದೇ ಲೋಪವಾಗದಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಹೇಳಿದರು.

ಬುಧವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಜೂನ್ 23ರಂದು ರಾಯಚೂರು ಗ್ರಾಮಾಂತರ ಕ್ಷೇತ್ರದ



ಯರಗೇರಾ ಗ್ರಾಮದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನ ಹತ್ತಿರ ಬುಡಕಟ್ಟು ಉತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

371(ಜೆ) ದಶಮಾನೋತ್ಸವ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ 371(ಜೆ) ಪ್ರಮಾಣ ಪತ್ರದ ಮೂಲಕ ವಿವಿಧ ಉನ್ನತ ಹುದ್ದೆಗಳಿಗೆ ನೇಮಕಾತಿಯಾದವರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಯಚೂರು ವಿಶ್ವವಿದ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿಯವರ ಕಂಚಿನ ಪುತ್ಥಳಿ ಹಾಗೂ ಲೋಗೋ ಅನಾವರಣ ನಡೆಯಲಿದೆ ಎಂದು ಅವರು ತಿಳಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಮಾತನಾಡಿ, 2ನೇಪುಟಕ್ಕೆ

## ಬೆಳಗು ಟ್ರಸ್ಟ್‌ನಿಂದ 3ನೇ ವಾರ್ಷಿಕೋತ್ಸವ: ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.11–** ಬೆಳಗು ಸಾಮಾಜಿಕ, ಸಾಂಸ್ಕೃತಿಕ, ಶೈಕ್ಷಣಿಕ ಟ್ರಸ್ಟ್‌ನ 3ನೇ ವಾರ್ಷಿಕೋತ್ಸವವನ್ನು ಜೂನ್ 28 ರಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಸಿದ್ದಾರ್ಥ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಟ್ರಸ್ಟ್‌ನ ತಾಲ್ಲೂಕು ಅಧ್ಯಕ್ಷ ಶರಣಕುಮಾರ ಅವರು ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಈ ವಾರ್ಷಿಕೋತ್ಸವದಲ್ಲಿ ತಾಲ್ಲೂಕಿನಲ್ಲಿ ಪಿ.ಯು.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನಗದು ಬಹುಮಾನ ನೀಡಿ ಗೌರವಿಸಲಾಗುವುದು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಗಳಲ್ಲಿ, ಧಾರವಾಡದ ಸ್ಪರ್ಧಾ ಜಿನೀಯಸ್ ಅಕಾಡೆಮಿಯ ಸಂಪನ್ಮೂಲ ವ್ಯಕ್ತಿಗಳಿಂದ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಕಾರ್ಯಾಗಾರ ನಡೆಯಲಿದೆ. ಜೊತೆಗೆ,




ಕಲ್ಯಾಣ ಕರ್ನಾಟಕ ಭಾಗದಲ್ಲಿನ ಸಮಸ್ಯೆಗಳು ಮತ್ತು ಅವುಗಳ ನಿವಾರಣಾ ಕ್ರಮಗಳ ಕುರಿತು ರಜಾಕ್ ಉಸ್ತಾದ್ ಅವರಿಂದ ವಿಶೇಷ ಉಪನ್ಯಾಸ ಇರಲಿದೆ.


ಈ ಕಾರ್ಯಕ್ರಮದ ಸದುಪಯೋಗವನ್ನು ವಿದ್ಯಾರ್ಥಿಗಳು ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರು ಪಡೆದುಕೊಳ್ಳುವಂತೆ ಶರಣಕುಮಾರ ಮನವಿ ಮಾಡಿದರು. ಪಿ.ಯು.ಸಿ. ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ತಮ್ಮ ಹೆಸರುಗಳನ್ನು 9743402280 ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿಕೊಳ್ಳಲು ಕೋರಿದ್ದಾರೆ.

ಈ ಸಂದರ್ಭದಲ್ಲಿ ಸತ್ಯನಾರಾಯಣ ವಕೀಲರು, ಮೊಹಮ್ಮದ್ ಬೇಗ್, ಬಸವರಾಜ ಬಾಗಲವಾಡ, ಬಸವರಾಜ ಕರಬದಿನ್ನಿ, ವಾಲ್ಮೀಕಿ ಸಂಘದ ಜಿಲ್ಲಾಧ್ಯಕ್ಷರಾದ ಶರಣಬಸವ ಜಾನೇಕಲ್, ಶಿವರಾಜ್ ಹೊಸೂರು, ಹನುಮಂತರಾಯ ಕಪಗಲ್, ವಕೀಲರು, ಹನುಮೇಶ ರಂಗದಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ತಹಶೀಲ್ದಾರ್‌ರಿಂದ ಗಣಕಿಕೃತ ದಾಖಲೆಗಳ ವಿತರಣೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.11–**ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿನ ದಾಖಲೆಗಳ ವಿಭಾಗದಲ್ಲಿ ದಾಖಲೆಗಳಿಗಾಗಿ ಅರ್ಜಿಸಲ್ಲಿಸಿದ ಅರ್ಜಿದಾರರಿಗೆ ತಹಸೀಲ್ದರ್ ಭೀಮರಾಯ ರಾಮಸಮುದ್ರಂ ಗಣಕಿಕೃತ ದಾಖಲೆಗಳನ್ನು ವಿತರಿಸಿ ಮಾತನಾಡಿ ಭಾರತ ಸರ್ಕಾರ ಹಾಗೂ ರಾಜ್ಯ ಕಂದಾಯ ಇಲಾಖೆಯ ವತಿಯಿಂದ ರೈತರ ಭೂದಾ ಖಲೆಗಳ ಸುರಕ್ಷತೆಗಾಗಿ ಭೂ ಸುರಕ್ಷಾ ಯೋಜನೆ ಅಡಿಯಲ್ಲಿ ತಾಲೂಕಿನ ಎಲ್ಲಾ ರೈತರ ಜಮೀನುಗಳ ದಾಖಲೆಗಳನ್ನು ಗಣಕೀಕರಣ ಗೊಳಿಸುವುದಕ್ಕೆ ಚಾಲನೆ ನೀಡಿದ್ದು ಶೇ.70 ರಷ್ಟು ದಾಖಲೆಗಳನ್ನು ಗಣಕಿಕರಂ ಗೊಳ್ಳಿಸಲಾಗಿದ್ದು ಉಳಿದ ದಾಖಲೆಗಳನ್ನು



ಕೂಡ ಶೀಘ್ರದಲ್ಲಿ ಗಣಕೀಕರಣ ಗೊಳ್ಳಿಸುವ ಮೂಲಕ ರೈತರ ದಾಖಲೆಗಳು ಸುರಕ್ಷಿತವಾಗಿರಿಸಲಾಗುವುದು ಹಾಗೂ ರೈತರಿಗೆ ಅಗತ್ಯವಿರುವ ದಾಖಲೆಗಳು ಕಡಿಮೆ ಸಮಯದಲ್ಲಿ ನೀಡುವುದಕ್ಕೆ ಸಾಧ್ಯವಾಗಲಿದೆ ಎಂದು ತಿಳಿಸಿದರು.

ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್, ಶಿರಸ್ತೆದಾರ ವಿರುಪಣ್ಣ ,ಕಂದಾಯ ನಿರೀಕ್ಷಕರಾದ ಸತೀಶ ಕುಮಾರ, ಎಸ್.ಡಿ.ಎ. ಅಮಿತ್ ಹರ್ಷಪಾಲ್ ಸೇರಿದಂತೆ ಇನ್ನಿತರರು ಇದ್ದರು.

## ಅಬಕಾರಿ ಇನ್ಸ್‌ಪೆಕ್ಟರ್ ಮಿಂಚಿನ ದಾಳಿ : ಕಳ್ಳಭಟ್ಟಿ ವಶ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.11–**ತಾಲ್ಲೂಕಿನ ಬೊಮ್ಮನಾಳ ತಾಂಡಾದ ಮನೆಯೊಂದರ ಮೇಲೆ ದಾಳಿ ನಡೆಸಿದ ಅಬಕಾರಿ ಪೊಲೀಸರು ಕಳ್ಳಭಟ್ಟಿ ಸಾರಾಯಿ, ಬೆಲ್ಲದ ಕೊಳೆಯನ್ನು ವಶಪಡಿಸಿಕೊಂಡಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಇನ್ಸಪೆಕ್ಟರ್ ಲಕ್ಷ್ಮೀದೇವಿಯ ನೇತೃತ್ವದಲ್ಲಿ ದಾಳಿ ನಡೆಸಿ, ಚಂದ್ರು ದಂಜಪ್ಪ ಎನ್ನುವವರ ಮನೆಯಲ್ಲಿ ಆಕ್ರಮವಾಗಿರಿಸಿದ್ದ 3



ಲೀಟರ್ ಕಳ್ಳಭಟ್ಟಿ, 20 ಲೀಟರ್ ಬೆಲ್ಲದ ಕೊಳೆ ವಶಕ್ಕೆ ಪಡೆದು, ಆರೋಪಿ ವಿರುದ್ಧ ಪ್ರಕರಣ ದಾಖಲು ಮಾಡಿದ್ದಾರೆ. ಈ ಸಂದರ್ಭದಲ್ಲಿ ಸಂಗಪ್ಪ, ಮಂಜುನಾಥ ಸೇರಿದಂತೆ ಇದ್ದರು.

### ಬಸ್ ಸೌಲಭ್ಯವಿಲ್ಲದೆ ವಿದ್ಯಾರ್ಥಿಗಳು ಕೂಲಿ ಕೆಲಸಕ್ಕೆ । ವ್ಯಾಪಾರಿಗಳಿಗೆ ರೈತರಿಗೆ ಜನಸಾಮಾನ್ಯರಿಗೆ ತೀವ್ರ ತೊಂದರೆ

## ರಸ್ತೆ ಸರಿಪಡಿಸಿ ಬಸ್ ಸೌಲಭ್ಯ ಒದಗಿಸದಿದ್ದರೆ ಗ್ರಾಮಸ್ಥರಿಂದ ಪ್ರತಿಭಟನೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.11–**ತಾಲೂಕಿನ ಜಾಗೀರಪನ್ನೂರು ಮತ್ತು ಯಡಿವಾಳ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ತೀವ್ರ ದುಸ್ಥಿತಿಯಿಂದಾಗಿ ಸಾರಿಗೆ ಬಸ್ ಸಂಚಾರ ಸ್ಥಗಿತಗೊಂಡಿದ್ದು, ಇದರಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ರಸ್ತೆಗಳ ತುರ್ತು ದುರಸ್ತಿ ಮತ್ತು ಬಸ್ ಸೌಲಭ್ಯ ಮರುಸ್ಥಾಪಿಸುವಂತೆ ಒತ್ತಾಯಿಸಿ ಗ್ರಾಮಸ್ಥರು ಹಾಗೂ ವಿವಿಧ ಸಂಘಟನೆಗಳು ಬಸವ ವೃತ್ತದಲ್ಲಿ ರಸ್ತೆ ತಡೆ ಚಳುವಳಿ ನಡೆಸುವುದಾಗಿ ಬಹುಜನ ಸಂಘರ್ಷ ಸಮಿತಿ ತಹಶೀಲ್ದಾರ್ ಗೆ ಮನವಿ ಸಲ್ಲಿಸಿ ಎಚ್ಚರಿಸಲಾಯಿತು.

ತಾಲೂಕು ಕೇಂದ್ರದಿಂದ ಸುಮಾರು 17 ಕಿ.ಮೀ ದೂರದಲ್ಲಿರುವ ಜಾಗೀರಪನ್ನೂರು ಮತ್ತು ಯಡಿವಾಳ ಗ್ರಾಮಗಳಿಗೆ ಹಲವು ವರ್ಷಗಳಿಂದ ಬಸ್ ಸೌಲಭ್ಯವಿತ್ತು. ಆದರೆ ಕಳೆದ ಎರಡು ತಿಂಗಳಿಂದ ರಸ್ತೆಗಳು ತೀವ್ರ ಹದಗೆಟ್ಟು ಗುಂಡಿಮಯವಾಗಿರುವುದರಿಂದ ಸಾರಿಗೆ ಬಸ್ ಸೇವೆಯನ್ನು ರದ್ದುಪಡಿಸಲಾಗಿದೆ. ಇದರಿಂದ ವಯೋವೃದ್ಧರು, ಗರ್ಭಿಣಿಯರು, ರೈತರು, ಕೂಲಿ ಕಾರ್ಮಿಕರು ಮತ್ತು ಶಾಲಾ–ಕಾಲೇಜು ವಿದ್ಯಾರ್ಥಿಗಳು ತಾಲೂಕು ಕೇಂದ್ರಕ್ಕೆ ಹೋಗಿ ಬರಲು ತೀವ್ರ ತೊಂದರೆ ಅನುಭವಿಸುವಂತಾಗಿದೆ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡಿರು.

ಪ್ರಸ್ತುತ 2025–26ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭವಾಗಿದ್ದು, ವಿದ್ಯಾರ್ಥಿಗಳು



ಶಾಲಾ–ಕಾಲೇಜುಗಳಿಗೆ ತೆರಳಲು ಪರದಾಡುತ್ತಿದ್ದಾರೆ. ಬಸ್ ಸೌಲಭ್ಯವಿಲ್ಲದ ಕಾರಣ ಬಡ ವಿದ್ಯಾರ್ಥಿಗಳು ಶಾಲಾ–ಕಾಲೇಜು ಪ್ರವೇಶಾತಿ ಪಡೆಯದೆ ಕೂಲಿ ಕೆಲಸಕ್ಕೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲವರು ತಾಲೂಕು ಕೇಂದ್ರಕ್ಕೆ ತೆರಳುವ ವಾಹನಗಳು ಅಥವಾ ದ್ವಿಚಕ್ರ ವಾಹನಗಳಲ್ಲಿ 'ಡ್ರಾಪ್' ಪಡೆದು ಶಾಲೆಗೆ ಹೋಗುವ ಅನಿವಾರ್ಯತೆ ಎದುರಾಗಿದೆ.

ಸಾರ್ವಜನಿಕರು ಪ್ರತಿ ವ್ಯವಹಾರಕ್ಕೂ ಸುಮಾರು ದೂರ ನಡೆದುಕೊಂಡು ತಾಲೂಕು ಕೇಂದ್ರಕ್ಕೆ ಹೋಗಬೇಕಾಗಿದೆ. ಅಂಬುಲೆನ್ಸ್ ಸೌಲಭ್ಯವಿಲ್ಲದ ಕಾರಣ ವಯೋವೃದ್ಧರು, ಗರ್ಭಿಣಿಯರು ಸೇರಿದಂತೆ ತುರ್ತು ಚಿಕಿತ್ಸೆ ಅಗತ್ಯವಿರುವ ರೋಗಿಗಳು ವೈದ್ಯಕೀಯ ನೆರವು ಪಡೆಯಲು ಅಪಾರ ತೊಂದರೆ ಅನುಭವಿಸುತ್ತಿದ್ದಾರೆ. ರೈತರು ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೃಷಿ ಪರಿಕರಗಳನ್ನು ತಾಲೂಕು ಕೇಂದ್ರದಿಂದ ತರಲು ಹೆಣಗಾಡುತ್ತಿದ್ದಾರೆ. ಕೃಷಿ ಕೂಲಿ ಕಾರ್ಮಿಕರು ಮತ್ತು ಅಸಂಘಟಿತ ಕಾರ್ಮಿಕರು ಕೆಲಸಕ್ಕೆ ಹೋಗಲಾಗದೆ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ.

ಒಂದು ವಾರದೊಳಗೆ ರಸ್ತೆಗಳನ್ನು ದುರಸ್ತಿಗೊಳಿಸಿ, ಸಾರಿಗೆ ಬಸ್ ಸೌಲಭ್ಯವನ್ನು ಕೂಡಲೇ ಕಲ್ಪಿಸಿ, ವಿದ್ಯಾರ್ಥಿಗಳು, ಸಾರ್ವಜನಿಕರು, ವಯೋವೃದ್ಧರು, ಗರ್ಭಿಣಿಯರು ಮತ್ತು ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದೆ. ಒಂದು ವೇಳೆ ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿದಲ್ಲಿ, ಜಾಗೀರಪನ್ನೂರು ಮತ್ತು ಯಡಿವಾಳ ಗ್ರಾಮಗಳ ಸಾರ್ವಜನಿಕರು, ವಿದ್ಯಾರ್ಥಿಗಳು ಸೇರಿಕೊಂಡು ಬಸವ ವೃತ್ತದಲ್ಲಿ ರಸ್ತೆ ರೋಖೋ ಚಳುವಳಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸಂಪತ್ ರಾಜ್ ಜಾಗೀರಪನ್ನೂರು, ಯಮನಪ್ಪ ಜಾಗೀರ ಪನ್ನೂ ರು, ಅಬ್ರಹಾಂ ಪನ್ನೂರು, ರವಿಕುಮಾರ್ ಮದ್ಲಾಪುರ, ಕುಮಾರ ಕಾತರಕಿ, ಆಕಾಶ್ ಮೇತ್ರಿ, ಮರಿಸ್ವಾಮಿ, ವಸಂತ ಇದ್ದರು.

ಮೊದಲನೇಯ ಪುಟದಿಂದ

# ಹಟ್ಟಿ ಗೋಲ್ಡ್ ಮೈನ್ ಕಂಪನಿಯ ನೌಕರರ ಸುರಕ್ಷತೆಗೆ ಗಮನ ಹರಿಸಿ

ಎಂದು ಅಧ್ಯಕ್ಷರು ಎಂಡಿ ಅವರಿಗೆ ನಿರ್ದೇಶನ ನೀಡಿದರು.

**ಮಕ್ಕಳಿಗೆ ಸೌಲಭ್ಯ ಕಲ್ಪಿಸಿ:** ಕೆಳಗಿಳಿದರೆ ಹೊರ ಬರುತ್ತವೆಯೋ ಇಲ್ಲೊ ಅನ್ನುವಂತಹ ಮೈನಿಂಗ್ ಕಂಪನಿಯಲ್ಲಿ ಬೆಂಕಿ, ಬೃಹಧಾಕಾರದ ಮಸೀನ್ ಬಳಿ ಕೆಲಸ ಮಾಡುವ ನೌಕರರ ಕುಟುಂಬದವರ ಮಕ್ಕಳಿಗೆ ಇಲ್ಲಿಯೇ ಉನ್ನತ ದರ್ಜೆಯ ಶಿಕ್ಷಣ ಸಿಗುವ ನಿಟ್ಟಿನಲ್ಲಿ ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಲು ಕ್ರಮವಹಿಸಬೇಕು ಎಂದು ಸಮಿತಿಯ ಸದಸ್ಯರು ಕಂಪನಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ವರದಿ ಕೊಡಿ:** ಕಂಪನಿಯ ಹೊರಗುತ್ತಿಗೆ ನೌಕರರಿಗೆ ಮಾನವ ಸಂಪನ್ಮೂಲ ಸಂಸ್ಥೆಗಳಿಂದ ಸರಿಯಾಗಿ ವೇತನ ಪಾವತಿಯಾಗುವಂತೆ ಕಟ್ಟುನಿಟ್ಟಿನ ಕ್ರಮವಹಿಸಬೇಕು ಎಂದು ಸೂಚನೆ ನೀಡಿದ ಅಧ್ಯಕ್ಷರು, ಇದುವರೆಗೆ ಕಂಪನಿಯು ಹೊರಗುತ್ತಿಗೆ ನೌಕರರ ವೇತನಕ್ಕಾಗಿ ಮಾನವ ಸಂಪನ್ಮೂಲ ಸಂಸ್ಥೆಗಳಿಗೆ ಹಣ ಸಂದಾಯ ಮಾಡಿದ ಬಗ್ಗೆ ವಿವರವಾದ ಮಾಹಿತಿ ನೀಡಲು ಅಧಿಕಾರಿಗಳಿಗೆ ಅಧ್ಯಕ್ಷರು ಸೂಚನೆ ನೀಡಿದರು.

**ಮತ್ತೊಮ್ಮೆ ಪರಿಶೀಲಿಸಿ:** ಈ ಕಂಪನಿಯಲ್ಲಿ ನೌಕರರು ಕಷ್ಟಕರ ಕೆಲಸ ಮಾಡುತ್ತಾರೆ. ನಾನಾ ಕಾರಣಕ್ಕೆ ನೌಕರಿ ಕಳೆದುಕೊಂಡ ಕಂಪನಿಯ ಕೆಲ ನೌಕರರನ್ನು ಮರಳಿ ಕೆಲಸಕ್ಕೆ ತೆಗೆದುಕೊಳ್ಳಲು ಪುನಃ ಪರಿಶೀಲಿಸಬೇಕು ಎಂದು ಅಧ್ಯಕ್ಷರು ಸೂಚನೆ ನೀಡಿದರು.

**ನ್ಯೂ ಟೆಕ್ನಾಲಜಿ ಅಳವಡಿಸಿ:** ಹಟ್ಟಿ ಗೋಲ್ಡ್ ಕಂಪನಿಯು ಜಿಂದಾಲ್ ಕಂಪನಿಗೆ ಸರಿಸಮವಾಗಿದೆ. ಮಸೀನಗಳು ಮಾಡಬೇಕಾದ ಎಷ್ಟೋ ಕಾರ್ಯವು ಇನ್ನು ಇಲ್ಲಿ ನೌಕರರೇ ಮಾಡುತ್ತಿದ್ದಾರೆ. ನೌಕರರ ಹಿತರಕ್ಷಣೆ ದೃಷ್ಟಿಯಿಂದ ಕಂಪನಿಯಲ್ಲಿ ಹೊಸ ಹೊಸ ತಂತ್ರಜ್ಞಾನ, ಸಲಕರಣೆ, ಮಸೀನಗಳನ್ನು ಅಳವಡಿಸುವತ್ತ ಅಧಿಕಾರಿಗಳು ಗಮನ ಹರಿಸಬೇಕು ಎಂದು ಸಮಿತಿಯ ಸದಸ್ಯರು ಸೂಚನೆ ನೀಡಿದರು.

**ಟೆಂಡರ್ ಪಾರದರ್ಶಕವಾಗಿ ನಡೆಸಿ:** ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದಲ್ಲಿ ಪ್ರತಿ ವರ್ಷ ಅಂದಾಜು 1,600 ಕೆ.ಜಿ. ಬಂಗಾರದ ಉತ್ಪಾದನೆ ಆಗುತ್ತಿದೆ ಅನ್ನುವುದು ಗಮನಾರ್ಹ ಸಂಗತಿಯಾಗಿದೆ.

ಇಲ್ಲಿ ಉತ್ಪಾದನೆಯಾದ ಚಿನ್ನದ ಮಾರಾಟವು ಪಾರದರ್ಶಕವಾಗಿ ನಡೆಯಬೇಕು. ಓಪನ್ ಮಾರ್ಕೆಟನಲ್ಲಿ ಟೆಂಡರ್ ಮಾಡಿ, ಟೆಂಡರ್ ವಿವರಗಳನ್ನು ಹೆಚ್ಚಿಗೆ ಪ್ರಚುರಪಡಿಸಿ. ನೈಜ ಚಿನ್ನದ ಎಜೇನ್ಸಿಗಳು, ಮಾರಾಟಗಾರರು ಭಾಗಿಯಾಗುವ ಹಾಗೆ

ಟೆಂಡರ್ ಪ್ರಕ್ರಿಯೆ ಶಿಸ್ತು ಬದ್ಧವಾಗಿ ನಡೆಯಬೇಕು. ಇ–ಹರಾಜಿಗೆ ಕ್ರಮವಹಿಸಬೇಕು ಎಂದು ಅಧ್ಯಕ್ಷರು, ಕಂಪನಿಯ ಎಲ್ಲ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಕಳೆದ ಮೂರು ವರ್ಷದಲ್ಲಿ ಈ ಕಂಪನಿಯಲ್ಲಿ ಉತ್ಪಾದನೆಯಾದ ಚಿನ್ನದ ಪ್ರಮಾಣ ಎಷ್ಟು? ಯಾವ ಯಾವ ಏಜೆನ್ಸಿಗೆ? ಯಾವ ಯಾವ ದರಕ್ಕೆ ಮಾರಾಟ ಮಾಡಿದ್ದೀರಿ ಎಂಬುದರ ಬಗ್ಗೆ ಸವಿವರವಾದ ವರದಿ ನೀಡಲು ಅಧ್ಯಕ್ಷರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ವಿಧಾನ ಪರಿಷತ್ ಶಾಸಕರಾದ ನಿರಾಣಿ ಹನುಮಂತಪ್ಪ ರುದ್ರಪ್ಪ, ಪ್ರತಾಪ ಸಿಂಹ ನಾಯಕ ಕೆ., ಡಿ ಎಸ್ ಅರುಣ, ಕೆ.ಎಸ್.ನವೀಣ, ಮಂಜುನಾಥ ಭಂಡಾರಿ, ತಿಪ್ಪಣ್ಣಪ್ಪ ಕಮಕನೂರ, ಕರ್ನಾಟಕ ವಿಧಾನ ಪರಿಷತ್ ಕಾರ್ಯದರ್ಶಿ ಕೆ ಆರ್ ಮಹಾಲಕ್ಷ್ಮಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಕಂಪನಿಯ ವ್ಯವಸ್ಥಾಪಕ ನಿರ್ದೇಶಕಿ ಶಿಲ್ಪಾ, ಪೊಲೀಸ್ ಇಲಾಖೆಯ ಸಿಪಿಐ ಶ್ರೀಪಾದ ಜಲ್ದೆ ಸೇರಿದಂತೆ, ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು, ಹಟ್ಟಿ ಗೋಲ್ಡ್ ಮೈನಿಂಗ್ ಕಂಪನಿಯ ಇನ್ನಿತರ ಅಧಿಕಾರಿಗಳು ಇದ್ದರು.

# ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಯಾಗಲಿ: ಶಾಸಕರಾದ ಬಸನಗೌಡ ದದ್ದಲ್

ಜಿಲ್ಲೆಯ ಯರಗೇರ ಗ್ರಾಮದಲ್ಲಿ ಬುಡಕಟ್ಟು ಉತ್ಸವ ಕಾರ್ಯಕ್ರಮಕ್ಕೆ

ಮುಖ್ಯಮಂತ್ರಿಗಳು ಆಗಮಿಸುವ ಹಿನ್ನಲೆಯಲ್ಲಿ ಜಿಲ್ಲಾಡಳಿತದಿಂದ ಸ್ವಾಗತ ಸಮಿತಿ, ಸ್ಥಳ, ವೇದಿಕೆ ವ್ಯವಸ್ಥೆ ಸಮಿತಿ, ಕಾನೂನು ಸುವ್ಯವಸ್ಥೆ ಹಾಗೂ ಭದ್ರತಾ ಸಮಿತಿ, ಆಹಾರ ಕುಡಿಯುವ ನೀರು ಮತ್ತು ವಿಶ್ರಾಂತಿ ವ್ಯವಸ್ಥೆ ಸಮಿತಿ, ಪತ್ರಿಕಾ ಮತ್ತು ಮಾಧ್ಯಮ ನಿರ್ವಹಣಾ ಸಮಿತಿ, ವೈದ್ಯಕೀಯ ಮತ್ತು ತುರ್ತು ಸೇವಾ ಸಮಿತಿಗಳನ್ನು ರಚನೆ ಮಾಡಲಾಗಿದ್ದು, ಎಲ್ಲಾ ಸಮಿತಿಯ ಅಧಿಕಾರಿಗಳು ತಮ್ಮ– ತಮ್ಮ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡದರು.

ಅಂದು ಕಾರ್ಯಕ್ರಮದಲ್ಲಿ ಸರ್ಕಾರದ ಸಾಧನೆ ಹಾಗೂ ಯೋಜನೆಗಳ ಕುರಿತಂತೆ ಸ್ಟಾಲ್ ಹಾಕುವ ವ್ಯವಸ್ಥೆ ಮಾಡಬೇಕು. ಅರ್ಹ ಫಲಾನುಭವಿಗಳಿಗೆ ಸೌಲಭ್ಯ ವಿತರಣಾ ಕಾರ್ಯಕ್ರಮ ನಡೆಯಲಿದ್ದು, ಸಂಬಂಧಿಸಿದ ಅಧಿಕಾರಿಗಳು ಇಲಾಖಾವಾರು ಮಾಹಿತಿಯನ್ನು ನೀಡಬೇಕೆಂದರು.

371(ಜೆ) ಸೌಲಭ್ಯದಿಂದ ವಿವಿಧ ಉನ್ನತ ಹುದ್ದೆಗಳಿಗೆ ನೇಮಕಾತಿಯಾದವರ ಬಗ್ಗೆ ರಾಯಚೂರು ತಹಶೀಲ್ದಾರರು ಹಾಗೂ ಡಿಡಿಪಿಐ ಅವರು ಅಂಕಿಸಂಖ್ಯೆಗಳನ್ನು ಸಂಗ್ರಹಿಸಿಬೇಕು ಎಂದರು.

ಇದೇ ಸಂದರ್ಭದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪೂರೆ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ರಾಯಚೂರು ಕೃಷಿ ವಿಶ್ವವಿದ್ಯಾಲಯದ ಕುಲ ಸಚಿವರಾದ ಡಾ.ಕೆ.ಆರ್.ದುರುಗೇಶ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ಕೃಷ್ಣ, ಪಶು ಸಂಗೋಪಾನ ಇಲಾಖೆ ಉಪ ನಿರ್ದೇಶಕರಾದ ಅಶೋಕ ಕೋಲ್ಕಾರ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ ಎಮ್.ಎಸ್., ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಚಿದಾನಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಗ್ರಂಥಾಲಯ ಇಲಾಖೆ ಅಧಿಕಾರಿ ನಿರ್ಮಲ, ಕಾರ್ಮಿಕ ಇಲಾಖೆ ಅಧಿಕಾರಿ ಆರತಿ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಮಾರಕಾಸ್ತ್ರಗಳಿಂದ ಕೊಚ್ಚಿ ರೌಡಿಶೀಟರ್ ಕೊಲೆ



**ಕಲಬುರಗಿ,ಜೂ.11–**ರೌಡಿ ಶೀಟರ್ ಒಬ್ಬನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಹತ್ಯೆ ಮಾಡಿರುವ ಘಟನೆ ಆಳಂದ ತಾಲ್ಲೂಕಿನ ಸಾವಳೇಶ್ವರ ಕ್ರಾಸ್ ಬಳಿ ಮಂಗಳವಾರ ತಡರಾತ್ರಿ ನಡೆದಿದೆ. ಸುಧಾಕರ್ (32) ಕೊಲೆಯಾದ ವ್ಯಕ್ತಿ ಎಂದು ತಿಳಿದು ಬಂದಿದೆ.

ಮಂಗಳವಾರ ತಡರಾತ್ರಿ ಸಹೋದರನ ಜೊತೆ ಬೈಕ್ ಮೇಲೆ ತೆರಳುವಾಗ ದುಷ್ಕರ್ಮಿಗಳು ದಾಳಿ ನಡೆಸಿ ಮಾರಾಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದ್ದಾರೆ ಎನ್ನಲಾಗಿದೆ. ಈ ಘಟನೆಯಲ್ಲಿ ಸುಧಾಕರನ ಸಹೋದರನಿಗೆ ಗಂಭೀರ ಗಾಯವಾಗಿದ್ದು, ಆತನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಹಳೆ ವೈಷಮ್ಯದ ಹಿನ್ನೆಲೆಯಲ್ಲಿ ಕೊಲೆ ಮಾಡಿರುವ ಶಂಕೆ ಪೊಲೀಸರು ವ್ಯಕ್ತಪಡಿಸಿದ್ದಾರೆ. ಘಟನಾ ಸ್ಥಳಕ್ಕೆ ಆಳಂದ ಪೊಲೀಸರು ಭೇಟಿ ನೀಡಿ ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

# ಹುಣಚಾಳಗೆ ಡಾಕ್ಟರೇಟ್ ಪದವಿ ಪ್ರದಾನ

**ಕಲಬುರಗಿ,ಜೂ.11–**ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಹಿರಿಯ ಪ್ರಾಧ್ಯಾಪಕರಾದ ಹಾಗೂ ಮೌಲ್ಯಮಾಪನ ಕುಲಸಚಿವರಾದ ಡಾ.ನಿಜಲಿಂಗಪ್ಪ ವಾಯ್ ಮಟ್ಟಿಹಾಳ ಅವರ ಮಾರ್ಗದರ್ಶನದಲ್ಲಿ "ದಲಿತ ಬಂಡಾಯ ಕಥಾ ಸಾಹಿತ್ಯದಲ್ಲಿ ಸಂಸ್ಕೃತಿ ಸಂಘರ್ಷ" ಎಂಬ ವಿಷಯ ಕುರಿತು ಮಹಾಪ್ರಬಂಧ ಮಂಡಿಸಿರುವ ಸಂಶೋಧಕ, ಸ್ಟೇಷನ್ ಬಜಾರ್ ಸರಕಾರಿ ಪದವಿ ಪೂರ್ವ ಕಾಲೇಜಿನ ಕನ್ನಡ ಭಾಷಾ ಉಪನ್ಯಾಸಕ ಶಿವಪ್ಪ ಹಣಮಂತ ಹುಣಚಾಳ ಅವರಿಗೆ ಕರ್ನಾಟಕ ವಿಶ್ವವಿದ್ಯಾಲಯ ಡಾ. ಆರ್.ಸಿ. ಹಿರೇಮಠ ಕನ್ನಡ ಅಧ್ಯಯನ ಪೀಠದಿಂದ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗಿದೆ.

ಶಿವಪ್ಪ ಹಣಮಂತ ಹುಣಚಾಳ ಅವರು "ದಲಿತ ಬಂಡಾಯ ಕಥಾ ಸಾಹಿತ್ಯದಲ್ಲಿ ಸಂಸ್ಕೃತಿ ಸಂಘರ್ಷ"ಎಂಬ ವಿಷಯದ ಮೇಲೆ ಸಂಶೋಧನೆ ಕೈಗೊಂಡು ಪ್ರಸ್ತುತ ಮಹಾಪ್ರಬಂಧ ಒಂದು ಸಮಾಜಮುಖಿಯ ಅಧ್ಯಯನ ವಾಗಿದ್ದು, ಐದು ದಶಕಗಳ ಕನ್ನಡ ಸಾಹಿತ್ಯದ ಹಾಗೂ ಕರ್ನಾಟಕದ ಬದುಕಿನ ಬಹು ಮುಖ್ಯ ಜೀವಂತ ವಲಯೊಂದರ ಸೂಕ್ಷ್ಮ ಪರಿಶೀಲನೆ, ವಿಶ್ಲೇಷಣೆಯನ್ನು ಪ್ರಮಾಣಿಕವಾಗಿ ಕೈಗೊಂಡು ಅತ್ಯುತ್ತಮವಾದ ಪ್ರೌಢ ಮಹಾಪ್ರಬಂಧವನ್ನು ಸಿದ್ಧಪಡಿಸಿದ್ದಾರೆ. ಶ್ರೀಯುತರ ಸಾಧನೆಗೆ ಕಾಲೇಜಿನ ಪ್ರಾಂಶುಪಾಲರಾದ ಸುಜಾತಾ ಬಿರಾದರ ಹಾಗೂ ಉಪನ್ಯಾಸಕ ವೃಂದ ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.



# ಜಾತಿ ಮರು ಗಣತಿ ವರಿಷ್ಠರ ನಿರ್ಧಾರ: ಸಿಎಂ

**ಚಿಕ್ಕಬಳ್ಳಾಪುರ, ಜೂ. 11–** ಸಾಮಾಜಿಕ ಮತ್ತು ಶೈಕ್ಷಣಿಕ ಸಂಸ್ಥೆ (ಜಾತಿ ಗಣತಿ) ಮರುಗಣತಿ ನಡೆಸುವ ತೀರ್ಮಾನವನ್ನು ಪಕ್ಷದ ಹೈಕಮಾಂಡ್ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



2015ರಲ್ಲಿ ಜಾತಿಗಣತಿ ನಡೆದಿದ್ದು ಈಗ 10 ವರ್ಷಗಳು ಕಳೆದಿವೆ. ಹೀಗಾಗಿ ಮರು ಸಮೀಕ್ಷೆ ನಡೆಸುವಂತೆ ನಿರ್ದೇಶನ ನೀಡಿದೆ ಎಂದು ಗೌರಿಬಿದನೂರು ತಾಲ್ಲೂಕಿನ ಅಲಕಪುರ ಹೆಲಿಪ್ಯಾಡ್‌ನಲ್ಲಿ ಇಂದು ಸುದ್ದಿಗಾರರಿಗೆ ತಿಳಿಸಿದರು.ಕಾಂತರಾಜು ವರದಿ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದು, ಆ ವರದಿಯನ್ನು ಪೂರ್ಣವಾಗಿ ಕಡೆಗಣಿಸಿಲ್ಲ. ಕೆಲ ಬದಲಾವಣೆಯೊಂದಿಗೆ 60 ರಿಂದ 70 ದಿನಗಳಲ್ಲಿ ಮರು ಸಮೀಕ್ಷೆ ನಡೆಸಲಾಗುವುದು ಎಂದು ಹೇಳಿದರು.

ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಸಿದ್ದರಾಮಯ್ಯ ಬಿಜೆಪಿ ಯವರಿಗೆ ಸುಳ್ಳು ಹೇಳಿ ಜನರ ದಾರಿ ತಪ್ಪಿಸಿ ರಾಜಕೀಯವಾಗಿ ರಾಜೀನಾಮೆ ಕೇಳುವುದು ಅಭ್ಯಾಸವಾಗಿದೆ ಎಂದು ಟೀಕಿಸಿದರು.ಕುಂಭಮೇಳದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ 40 ರಿಂದ 50 ಜನ ಮೃತಪಟ್ಟಿದ್ದರು. ಆ ಸಮಯದಲ್ಲಿ ಬಿಜೆಪಿಯವರು ಆ ರಾಜ್ಯದ ಮುಖ್ಯಮಂತ್ರಿಗಳ ರಾಜೀನಾಮೆ ಕೇಳಿದರೆ ಸೇತುವೆಯೆಂದು ಉದ್ಘಾಟನೆಗೊಂಡ ದಿನವೇ ಬಿದ್ದು ಜನರು ಸಾವನ್ನಪ್ಪಿದ್ದರು. ಆಗ ಪ್ರಧಾನಿಯವರ ರಾಜೀನಾಮೆ ಕೇಳಿದರೆ ಗೋದ್ರಾ ಹತ್ಯೆಕಾಂಡದಲ್ಲಿ ಎಷ್ಟು ಮಂದಿ ಸತ್ತರು. ಆಗ ಗುಜರಾತ್ ಮುಖ್ಯಮಂತ್ರಿ ಯಾರಾಗಿದ್ದರು? ಕೋವಿಡ್ ಸಂದರ್ಭದಲ್ಲಿ ಆಮ್ಲಜನಕ ಸರಬರಾಜು ಮಾಡದೆ 23 ಜನರು ಮೃತಪಟ್ಟಿದ್ದಾಗ ಆಗ ಮುಖ್ಯಮಂತ್ರಿಯಾಗಿದ್ದಾಗ ಬಸವರಾಜ ಬೊಮ್ಮಾಯಿ ಅವರು ರಾಜೀನಾಮೆ ನೀಡಿದರೆ ಎಂದು ಮುಖ್ಯಮಂತ್ರಿಗಳು ಪ್ರಶ್ನೆಗಳ ಸುರಿಮಳೆಗೈದರು.

ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಏಕ ವ್ಯಕ್ತಿ ಆಯೋಗ ರಚನೆ ಮಾಡಿದ್ದು ಈ ಆಯೋಗ 30 ದಿನಗಳಲ್ಲಿ ವರದಿ ಸಲ್ಲಿಸಲಿದೆ. ಹೀಗಾಗಿ ಈ ಬಗ್ಗೆ ಮಾತನಾಡಲು ಸಿದ್ದರಾಮಯ್ಯ ನಿರಾಕರಿಸಿದರು.

ರಾಜ್ಯದ ವಿಶ್ವವಿದ್ಯಾಲಯದಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಖಾಲಿಯಿರುವ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲಾಗಿದೆ. ಅಗತ್ಯ ಬಿದ್ದರೆ ಇನ್ನು ಹೆಚ್ಚಿನ ಉಪನ್ಯಾಸಕರನ್ನು ನೇಮಿಸಿ ಅವರ ವೇತನ ಹೆಚ್ಚಿಸಿ ಸೌಲಭ್ಯಗಳನ್ನು ನೀಡಲಾಗಿದೆ. ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸರ್ಕಾರ ಒತ್ತು ನೀಡಿದೆ ಎಂದರು.

**2ವರ್ಷಗಳಲ್ಲಿ ಎತ್ತಿನ ಹೊಳೆ ಯೋಜನೆ**

ಜಲ ಜೀವನ್ ಯೋಜನೆಯಡಿ ರಾಜ್ಯ ಸರ್ಕಾರ 50% ಅನುದಾನ ನೀಡಿದ್ದಾರೆ 30% ಮಾತ್ರ ಕೇಂದ್ರ ಸರ್ಕಾರ ನೀಡುತ್ತದೆ. 20% ಫಲಾನುಭವಿಗಳು ನೀಡುತ್ತಾರೆ. ರಾಷ್ಟ್ರೀಯ ಆರೋಗ್ಯ ಮಿಷನ್ ಯೋಜನೆಯಡಿ ರಾಜ್ಯ ಸರ್ಕಾರದ ಪಾಲು ಹೆಚ್ಚಿದ್ದರೂ ಆಯುಷ್ಮಾನ್ ಭಾರತ್ ಯೋಜನೆ ಎನ್ನುತ್ತಾರೆ. ಅನೇಕ ಕೇಂದ್ರ ಪುರಸ್ಕೃತ ಯೋಜನೆಗಳಲ್ಲಿ ಪ್ರಧಾನ ಮಂತ್ರಿಗಳ ಹೆಸರಿರುತ್ತದೆ. ಕುಸುಮ್ ಬಿ ಯೋಜನೆಯಡಿ 30% ಕೇಂದ್ರದಿಂದ ಬರುತ್ತದೆ. ಒಪ್ಪದೇ ಹೋದರೆ ಅದೂ ಬರುವುದಿಲ್ಲ. ರೈತರಿಗೆ ಒಳ್ಳೆಯದಾಗಬೇಕು, ಗ್ರಾಮೀಣ ಪ್ರದೇಶದಲ್ಲಿ ಅಭಿವೃದ್ಧಿಯಾಗ ಬೇಕೆಂಬ ಉದ್ದೇಶದಿಂದ ಇದನ್ನು ಒಪ್ಪಿಕೊಳ್ಳಬೇಕಾಗುತ್ತದೆ ಎಂದರು.

ಎತ್ತಿನಹೊಳೆ ಯೋಜನೆ ಎರಡು ವರ್ಷಗಳಲ್ಲಿ ಮುಕ್ತಾಯವಾಗಬಹುದು ಎಂದು ತಿಳಿಸಿದ ಮುಖ್ಯಮಂತ್ರಿಗಳು, ಈ ಭಾಗದ ಸಚಿವರು, ಶಾಸಕರು, ಹಾಗೂ ಅಧಿಕಾರಿಗಳ ಸಭೆಯನ್ನು ಕರೆಯಲಾಗಿದೆ ಎಂದರು.ರಾಜ್ಯದ ಆರ್ಥಿಕ ಪರಿಸ್ಥಿತಿ ಚೆನ್ನಾಗಿದೆ. ಗ್ಯಾರಂಟಿ ಯೋಜನೆ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳಿಗೂ ಅನುದಾನ ಒದಗಿಸಲಾಗಿದೆ ಎಂದು ಮಾಧ್ಯಮಗಳ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಕಳೆದ ವರ್ಷ 52000 ಕೋಟಿ ರೂ.ಗಳ ಬಂಡವಾಳ ವೆಚ್ಚ ವಿತ್ತು. ಈ ವರ್ಷ 83 ಸಾವಿರ ಕೋಟಿಯಾಗಿದೆ ಎಂದರು. 31000 ಕೋಟಿ ಬಂಡವಾಳ ವೆಚ್ಚ ಒಂದು ವರ್ಷದಲ್ಲಿ ಹೆಚ್ಚಾಗಿದೆ. ಹೀಗಿರುವಾಗ ಸರ್ಕಾರ ದಿವಾಳಿ ಹೇಗೆ ಆಗುತ್ತದೆ. ಗ್ಯಾರಂಟಿ ಯೋಜನೆಗಳಿಗೆ ಐವತ್ತು ಸಾವಿರಕ್ಕೂ ಹೆಚ್ಚು ಅನುದಾನ ಒದಗಿಸಲಾಗಿದೆ ಎಂದರು. ನಮ್ಮ ಸರ್ಕಾರ ಎರಡು ವರ್ಷಗಳಲ್ಲಿ 593 ಭರವಸೆಗಳಲ್ಲಿ 242 ಭರವಸೆಗಳನ್ನು ಈಡೇರಿಸಿದ್ದು, ಕೇಂದ್ರ ಸರ್ಕಾರ 600 ಭರವಸೆಗಳನ್ನು ನೀಡಿ ಶೇ.10ರಷ್ಟನ್ನೂ ಅನುಷ್ಠಾನ ಮಾಡಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

**ಸಂಪುಟದಲ್ಲಿ ಚರ್ಚೆ**

ಗ್ರೇಟರ್ ಬೆಂಗಳೂರಿಗೆ ತುಮಕೂರು ಜಿಲ್ಲೆಯನ್ನು ಸೇರಿಸುವ ಕುರಿತು ಗೃಹ ಸಚಿವ ಪರಮೇಶ್ವರ್ ಅವರು ಸಲ್ಲಿಸಿರುವ ಪ್ರಸ್ತಾವನೆ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಹೇಳಿದರು.

# ಸಾಹಿತ್ಯ ಓದುವ ಆಸಕ್ತಿ ಬೆಳೆಸಿಕೊಳ್ಳಿ

**ಬೀದರ್: ಜೂ.11–** ಕನ್ನಡ ಸಾಹಿತ್ಯದ ಅಭಿವೃದ್ಧಿಗೆ ಎಲ್ಲರೂ ಪುಸ್ತಕ ಓದುವ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ ಹೇಳಿದರು.



ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದ ವತಿಯಿಂದ ನಗರದ ಗೌರಿಶಂಕರ ಹೋಟೆಲ್ ಸಭಾಂಗಣದಲ್ಲಿ ಈಚೆಗೆ ನಡೆದ ಸಾಹಿತಿ ವೀರೇಶ್ವರಿ ಮೂಲಗೆ ರಚಿತ ಅರಳಿದ ಸುಮ ಕಾದಂಬರಿ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಕನ್ನಡ ಭಾಷೆ ಹಾಗೂ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆಯಬೇಕು ಎಂದು ತಿಳಿಸಿದರು.

ಯುವ ಸಾಹಿತಿಗಳು ಒಂದೇ ಪ್ರಕಾರದ ಸಾಹಿತ್ಯಕ್ಕೆ ಸೀಮಿತ ರಾಗಬಾರದು. ವಿವಿಧ ಪ್ರಕಾರಗಳಲ್ಲಿ ಸಾಹಿತ್ಯ ಕೃಷಿ ಮಾಡಬೇಕು. ರಾಜ್ಯಮಟ್ಟದಲ್ಲಿ ಹೆಸರು ಗಳಿಸಬೇಕು ಎಂದು ಪುಸ್ತಕ ಬಿಡುಗಡೆಗೊಳಿಸಿದ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಹೇಳಿದರು. ವೀರೇಶ್ವರಿ ಮೂಲಗೆ ಉತ್ತಮ ಸಾಹಿತಿಗಳಲ್ಲಿ ಒಬ್ಬರಾಗಿದ್ದಾರೆ. ಕಾದಂಬರಿ, ಕಥೆ, ಗಜಲ್ ಮೊದಲಾದ ಪ್ರಕಾರದ ಸಾಹಿತ್ಯ ರಚಿಸಿ ಗಮನ ಸೆಳೆದಿದ್ದಾರೆ ಎಂದು ತಿಳಿಸಿದರು.

ಉತ್ತಮ ಸಾಹಿತಿಯಾಗಿ ಹೊರ ಹೊಮ್ಮಲು ಸಾಹಿತ್ಯ ಪರಂಪರೆಯ ಅಧ್ಯಯನ ಬಹಳ ಅವಶ್ಯಕವಾಗಿದೆ ಎಂದು ಹಿರಿಯ ಸಾಹಿತಿ ಡಾ. ಎಂ.ಜಿ. ದೇಶಪಾಂಡೆ ಹೇಳಿದರು.


ಜಿಲ್ಲೆಯ ಸಾಹಿತ್ಯ ಲೋಕಕ್ಕೆ ಮಹಿಳಾ ಸಾಹಿತಿಗಳ ಕೊಡುಗೆ ಹಿರಿದಾಗಿದೆ ಎಂದು ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷೆ ಭಾರತಿ ವಸ್ತ್ರದ್ ತಿಳಿಸಿದರು.ಔರಾದ್ ತಹಶೀಲ್ದಾರ್ ಮಹೇಶ ಪಾಟೀಲ ಮಾತನಾಡಿದರು. ಕಾದಂಬರಿ ಲೇಖಕಿ ವೀರೇಶ್ವರಿ ಮೂಲಗೆ ತಮ್ಮ ಅನುಭವಗಳನ್ನು ಹಂಚಿಕೊಂಡರು. ಡಾ. ಶ್ರೇಯಾ ಮಹೇಂದ್ರಕರ್ ಕಾದಂಬರಿ ಪರಿಚಯ ಮಾಡಿಕೊಟ್ಟರು.

ವಿವಿಧ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ರಮೇಶ ಬಿರಾದಾರ, ಸಂತೋಷಕುಮಾರ ಜೋಳದಾಪಕೆ, ಸುಶೀಲ್ ಮೊಟ್ಟಿ ಅವರನ್ನು ಸನ್ಮಾನಿಸಲಾಯಿತು.ಸಾಹಿತಿ ಜಗದೇವಿ ದುಬಲಗುಂಡೆ ಅಧ್ಯಕ್ಷತೆ ವಹಿಸಿದ್ದರು. ನಿರ್ಮಲಾ ಮೊಟ್ಟಿ, ವಿಶಾಲ್ ಮೊಟ್ಟಿ, ಸುಶೀಲ್ ಮೊಟ್ಟಿ, ಅಮರ ದುರ್ಗೆ ಉಪಸ್ಥಿತರಿದ್ದರು.

ಡಾ. ರಮೇಶ ಮೂಲಗೆ ಸ್ವಾಗತಿಸಿದರು. ಮಹೇಶ ಮಜಗೆ ನಿರೂಪಿಸಿದರು. ಪುಷ್ಪ ಕನಕ ವಂದಿಸಿದರು.

# ಮಲೇರಿಯಾ ಮುಕ್ತ ಸಮಾಜ ನಿರ್ಮಾಣಕ್ಕೆ ಸಹಕರಿಸಿ: ಮನೋಜ ಹಿರೇಮಠ

**ಕಮಲನಗರ:ಜೂ.11–** ಸ್ವಚ್ಛ ಸ್ವಸ್ಥ ವಾತಾವರಣದ ಮೂಲಕ ಮಲೇರಿಯಾ ಮುಕ್ತ ಸಮಾಜ ನಿರ್ಮಿಸಲು ಆರೋಗ್ಯ ಇಲಾಖೆ ಜೊತೆಗೆ ವಿದ್ಯಾರ್ಥಿಗಳು, ಸಾರ್ವಜನಿಕರು ಸಹಕರಿಸಬೇಕು ಎಂದು ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಹೇಳಿದರು.



ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಸೋಮವಾರ ಹೊಳಸಮುದ್ರ ಪ್ರಾಥಮಿಕ ಆರೋಗ್ಯ ಕೇಂದ್ರ ಆಶ್ರಯದಲ್ಲಿ ವಿಶ್ವ ಮಲೇರಿಯಾ ಮಾಸಾಚರಣೆ ಕುರಿತು ಹಮ್ಮಿಕೊಂಡ ಜನಜಾಗೃತಿ ಕಾರ್ಯಕ್ರಮದಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲಾದ್ಯಂತ ಈಗಾಗಲೇ ಮಲೇರಿಯಾ, ಚಿಕೂನ್ ಗುನ್ಯಾ, ಡೆಂಗೆ ನಿರ್ಮೂಲನೆಗೆ ವಿವಿಧ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಪಿಎಚ್‌ಸಿಓ ನಂದಕುಮಾರಿ ಮಾತನಾಡಿ, ಜಿಲ್ಲೆಯ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಮಲೇರಿಯಾ ಚಿಕಿತ್ಸೆ ಲಭ್ಯವಿದೆ. ಜಿಲ್ಲೆಯಲ್ಲಿ ವರ್ಷದಿಂದ ವರ್ಷಕ್ಕೆ ರೋಗಿಗಳ ಪ್ರಮಾಣ ಕ್ಷೀಣಿಸುತ್ತಿದೆ ಎಂದು ತಿಳಿಸಿದರು.

ಆರ್‌ಕೆಎಸ್‌ಕೆ ಕೌನ್ಸಿಲರ್ ಫರನಾಸ್, ಆಶಾ ಕಾರ್ಯಕರ್ತೆ ಮೀನಾಕ್ಷಿ, ಶಿಕ್ಷಕಿ ಸಿಬ್ಬಂದಿ ಶ್ರೀದೇವಿ, ಸಂಗೀತಾ, ದೀಪಮಾಲಾ, ಶೀತಲ, ಅಂಜಲಿ, ಅಶ್ವಿನಿ ಹಾಗೂ ಶಾಲೆ ಮಕ್ಕಳು ಇದ್ದರು.

# ಕುಸುಮ್ ಸಿ ಯೋಜನೆಗೆ ಸಿಎಂ ಸಿದ್ದರಾಮಯ್ಯ ಚಾಲನೆ

**ಬೆಂಗಳೂರು,ಜೂ.11–** ಸ್ಥಳೀಯವಾಗಿ ಸೌರಶಕ್ತಿ ಉತ್ಪಾದಿಸುವ ಮೂಲಕ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲಿನ ವೇಳೆ 7 ಗಂಟೆ ವಿದ್ಯುತ್ ಪೂರೈಸುವ ಕುಸುಮ್–ಸಿ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು. ಗೌರಿಬಿದನೂರು ತಾಲೂಕಿನ ಹನುಮೇನಹಳ್ಳಿಯಲ್ಲಿ ತೊಂಡೆಬಾವಿ ವಿದ್ಯುತ್ ಉಪಸ್ಥಾವರಕ್ಕೆ ಸೌರಶಕ್ತಿ ಪೂರೈಕೆಗೆ ಚಾಲನೆ ನೀಡಿದ ಮುಖ್ಯಮಂತ್ರಿ ಯವರು

ಇದೇ ವೇಳೆ ರಾಜ್ಯದ ನಾನಾ ಭಾಗಗಳಿಂದ ವಿದ್ಯುನಾನ ಮಾದರಿಯಲ್ಲಿ ಸಂಪರ್ಕದಲ್ಲಿದ್ದ ರೈತರೊಂದಿಗೆ ಸಂವಾದ ನಡೆಸಿದರು.ತುಮಕೂರು ಜಿಲ್ಲೆಯ ತಿಪಟೂರು ತಾಲೂಕಿನಲ್ಲಿ ನೂತನವಾಗಿ ಸ್ಥಾಪಿಸಲಾಗಿರುವ ವಿದ್ಯುತ್ ಸ್ಥಾವರದಲ್ಲಿನ ಫಲಾನುಭವಿ ರೈತರ ಜೊತೆ ಸಂವಾದ ನಡೆಸಿದ ಮುಖ್ಯಮಂತ್ರಿಯವರು, ಕುಸುಮ್–ಬಿ ಯೋಜನೆಗೆ ರಾಜ್ಯಸರ್ಕಾರ ಶೇ.50 ರಷ್ಟು ಹಣ ನೀಡುತ್ತಿದೆ. ಕೇಂದ್ರ ಸರ್ಕಾರ ಶೇ.30 ರಷ್ಟು, ಉಳಿದ ಶೇ.20 ರಷ್ಟನ್ನು ಹೂಡಿಕೆದಾರರು ಭರಿಸಲಿದ್ದಾರೆ ಎಂದರು. ಕುಸುಮ್–ಸಿ ಯೋಜನೆಗೆ ಕೇಂದ್ರ ಸರ್ಕಾರ ಒಂದು ವೆಗಾವ್ಯಾಟ್ ವಿದ್ಯುತ್ ಉತ್ಪಾದನೆಗೆ 1 ಕೋಟಿ 3 ಲಕ್ಷ ರೂ.ಗಳನ್ನು ಒದಗಿಸುತ್ತದೆ. ಉಳಿದ ಸುಮಾರು 3 ಕೋಟಿ ರೂ.ಗಳನ್ನು ರಾಜ್ಯಸರ್ಕಾರ ಭರಿಸುತ್ತಿದೆ ಎಂದರು.

ರೈತರ ಜಮೀನುಗಳನ್ನು ಬೋಗ್ಯಕ್ಕೆ ಪಡೆದು 25 ಸಾವಿರ ರೂ. ಭೂ ಬಳಕೆ ದರ ನೀಡಲಾಗುತ್ತಿದೆ ಎಂದಾಗ ತಿಪಟೂರು ಕ್ಷೇತ್ರದ ಶಾಸಕ ಕೆ.ಷಡಾಕ್ಷರಿ, ಈ ಮೊತ್ತವನ್ನು ಹೆಚ್ಚಿಸುವಂತೆ ಸಲಹೆ ನೀಡಿದರು. ಪ್ರತಿ ಎಕರೆಯಿಂದ ಕೃಷಿ ಮಾಡಿ 25 ಸಾವಿರ ರೂ. ಗಳಿಸಲಾಗುತ್ತಿದೆಯೇ ಎಂದು ಪ್ರಶ್ನಿಸಿದರು. ತಮ ತಾಲೂಕಿನ ಇನ್ನೂ ಐದಾರು ಕಡೆಗಳಲ್ಲಿ ಈ ಘಟಕಗಳನ್ನು ಆರಂಭಿಸುವಂತೆ ಶಾಸಕರು ಬೇಡಿಕೆಯಿಟ್ಟಾಗ ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿರುವುದರಿಂದ ಚರ್ಚೆ ನಡೆಸಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.


ಗದಗ ಜಿಲ್ಲೆಯ ಫಲಾನುಭವಿಗಳ ಜೊತೆ ಮುಖ್ಯಮಂತ್ರಿಗಳು ಸಂವಾದ ನಡೆಸುವ ವೇಳೆ ಬಿಜೆಪಿಯ ವಿಧಾನಪರಿಷತ್ ಸದಸ್ಯ ಎಸ್.ವಿ.ಸಂಕನೂರು, 2019 ರಲ್ಲಿ ಪ್ರಧಾನಮಂತ್ರಿ ನರೇಂದ್ರಮೋದಿ ಯೋಜನೆಯನ್ನು ಉದ್ಘಾಟಿಸಿದ್ದು, ನಿಮ ಸರ್ಕಾರ ಅದನ್ನು ಜಾರಿಗೊಳಿಸಿದೆ. ಯಾವುದೇ ಯೋಜನೆ ಅನುಷ್ಠಾನಗೊಳ್ಳಬೇಕಾದರೆ ಭೂಸ್ವಾಧೀನ ಹಾಗೂ ಇತರ ಪ್ರಕ್ರಿಯೆಗಳಿಂದಾಗಿ ವಿಳಂಬವಾಗುತ್ತದೆ ಎಂದು ಹೇಳಿದರು.

ಹಿಂದಿನ ಸರ್ಕಾರ ಯೋಜನೆಯನ್ನು ಆರಂಭಿಸಿಯೇ ಇರಲಿಲ್ಲ . ನಾವು ಅರ್ಧಕ್ಕಿಂತಲೂ ಹೆಚ್ಚಿನ ಹಣವನ್ನು ಭರಿಸುತ್ತಿದ್ದೇವೆ ಎಂದು ಮುಖ್ಯಮಂತ್ರಿಯವರು ಹೇಳಿದಾಗ, ಹಿಂದಿನ ಸರ್ಕಾರ ಆರಂಭಿಸಿಲ್ಲ ಎಂದು ಹೇಳಬೇಡಿ. ಯೋಜನೆ ಅನುಷ್ಠಾನಕ್ಕೆ ಆಯಾ ಕಾಲಘಟ್ಟಗಳು ಬೇಕಾಗುತ್ತದೆ. ಕೇಂದ್ರದ ಪಾಲನ್ನು ಹೆಚ್ಚಿಸಲು ನಾವೂ ಕೂಡ ಮನವಿ ಮಾಡುತ್ತೇವೆ ಎಂದರು.

ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ ಎಚ್.ಕೆ.ಪಾಟೀಲ್ ಆನ್‌ಲೈನ್ ಮೂಲಕವೇ ಸಂವಾದದಲ್ಲಿ ಭಾಗವಹಿಸಿ ಭೂಬಳಕೆ ದರ ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.ಈ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸುವುದಾಗಿ ಮುಖ್ಯಮಂತ್ರಿ ಜಾರಿಕೊಂಡರು. ಶಿರಾ, ಚಾಮರಾಜನಗರ ಜಿಲ್ಲೆಗಳ ರೈತರು ಸಂವಾದದಲ್ಲಿ ಭಾಗವಹಿಸಿ ಈ ಮೊದಲು ರಾತ್ರಿ ವೇಳೆ ವಿದ್ಯುತ್ ಪೂರೈಸುತ್ತಿದ್ದುದರಿಂದಾಗಿ ಕಾಡುಪ್ರಾಣಿಗಳ ಹಾವಳಿಯಿಂದ ಹೊಲಗಳಿಗೆ ಹೋಗಲು ಕಷ್ಟವಾಗುತ್ತಿತ್ತು. ಈಗ ಹಗಲು ವೇಳೆ ವಿದ್ಯುತ್ ಪೂರೈಕೆಯಾಗುತ್ತಿದ್ದು, ಜಮೀನಿಗೆ ನೀರು ಹರಿಸಿ ರಾತ್ರಿ ನೆಮದಿಯಾಗಿ ನಿದ್ರೆ ಮಾಡುತ್ತಿದ್ದೇವೆ. ಇದಕ್ಕಾಗಿ ಸರ್ಕಾರಕ್ಕೆ ಧನ್ಯವಾದಗಳು ಎಂದರು.

ಮುಂದಿನ ದಿನಗಳಲ್ಲಿ ಏಳು ಗಂಟೆ ಹಗಲಿನ ವೇಳೆಯಲ್ಲಿ ಗುಣಮಟ್ಟದ ವಿದ್ಯುತ್ ಪೂರೈಸುತ್ತೇವೆ. ರೈತರಿಗೆಂದು ಜಾರಿಗೊಳಿಸಿರುವ ಹಲವಾರು ಯೋಜನೆಗಳಲ್ಲಿ ಇದೂ ಒಂದು ಎಂದು ಹೇಳಿದರು.ಇಂಧನ ಸಚಿವ ಕೆ.ಜೆ.ಜಾರ್ಜ್ ಮಾತನಾಡಿ, ಈ ವರ್ಷ ನೂರು ಉಪಸ್ಥಾವರಗಳನ್ನು ಸ್ಥಾಪಿಸಲಾಗಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಉಪಸ್ಥಾವರಗಳನ್ನು ಹಾಗೂ ಅದಕ್ಕೆ ಪೂರಕ ವಿದ್ಯುತ್ ಮಾರ್ಗಗಳನ್ನು ನಿರ್ಮಿಸಲಾಗುವುದು ಎಂದರು.

ಕೃಷಿ ಪಂಪ್‌ಸೆಟ್‌ಗಳಿಗೆ 19 ಸಾವಿರ ವಿದ್ಯುತ್ ಸಬ್ಸಿಡಿ ನೀಡಲಾಗುತ್ತಿದೆ. ಸಾರ್ಟ್ ಮೀಟರ್ ಯೋಜನೆಯಲ್ಲಿ ದೇಶದ ಎಲ್ಲಾ ರಾಜ್ಯಗಳಲ್ಲೂ ಆರ್‌ಡಿಎಸ್‌ಎಸ್ ಯೋಜನೆ ಜಾರಿಗೊಳಿಸಲಾಗಿದೆ. ಕರ್ನಾಟಕ ಮತ್ತು ರಾಜ್ಯಗಳನ್ನು ಕೈಬಿಡಲಾಗಿದೆ. ಇದರಿಂದ ಆರ್ಥಿಕ ಹೊರೆ ಹೆಚ್ಚಾಗಿದೆ. ಕೇಂದ್ರ ಸರ್ಕಾರಕ್ಕೆ ಇದಕ್ಕಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ.




ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು. ಕೇಂದ್ರ ಆರ್‌ಡಿಎಸ್‌ಎಸ್‌ಗೆ ಒಪ್ಪಿಕೊಂಡರೆ ಶೇ. 60 ರಷ್ಟು ಅನುದಾನ ಬರಲಿದೆ ಎಂದು ಹೇಳಿದರು.

ಈವರೆಗೂ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವಿದ್ಯುತ್ ಬಿಲ್ ಪಾವತಿ ಬಾಕಿ ಇತ್ತು. ಅದಕ್ಕಾಗಿ ಹಲವು ಯೋಜನೆಗಳು ನೆನೆಗುದಿಗೆ ಬಿದ್ದಿವೆ. ಇನ್ನು ಮುಂದೆ ಸರ್ಕಾರಿ ಸಂಸ್ಥೆಗಳಿಗೆ ಹೊಸ ವಿದ್ಯುತ್ ಸಂಪರ್ಕ ನೀಡಲು ಮುಂಗಡ ಪಾವತಿ ಪದ್ಧತಿ ಅನುಸರಿಸುವಂತೆ ಕೇಂದ್ರ ಸರ್ಕಾರ ಷರತ್ತು ವಿಧಿಸಿದೆ. ಮುಂದೆ ಅದನ್ನು ಅನುಷ್ಠಾನಕ್ಕೆ ತರಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್, ಶಾಸಕರಾದ ಪ್ರದೀಪ್ ಈಶ್ವರ್, ವಿಧಾನಪರಿಷತ್ ಸದಸ್ಯರಾದ ಅನಿಲ್‌ಕುಮಾರ್, ಬಿ.ಟಿ.ಶ್ರಿ?ನಿವಾಸ್?, ಇಂಧನ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವಾಲ್ಮೀಕಿ ಹಗರಣ ಕಾಂಗ್ರೆಸ್ ಸಂಸದ, ಶಾಸಕರು ರಾಜೀನಾಮೆ ನೀಡುವಂತೆ ಶ್ರೀರಾಮುಲು ಒತ್ತಾಯ

**ಬೆಂಗಳೂರು,ಜೂ.11–** ಕರ್ನಾಟಕ ಮಹರ್ಷಿ ವಾಲ್ಮೀಕಿ ನಿಗಮದ ಹಣವನ್ನು ನುಂಗಿ ನೀರು ಕುಡಿದಿರುವ ಬಳ್ಳಾರಿ ಸಂಸದ ವಿ.ವಿ.ತುಕಾರಾಮ್ ಹಾಗೂ ಶಾಸಕರಿಗೆ ಕನಿಷ್ಟಪಕ್ಷ ನೈತಿಕತೆ ಇದ್ದರೆ ತಮ್ಮ ಸ್ಥಾನಕ್ಕೆ ತಕ್ಷಣವೇ ರಾಜೀನಾಮೆ ನೀಡಬೇಕೆಂದು ಮಾಜಿ ಸಚಿವ ಬಿ. ಶ್ರೀರಾಮುಲು ಒತ್ತಾಯಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಪಂಗಡದ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಸಂಸದ ಇ.ವಿ.ತುಕರಾಮ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್.ಗಣೇಶ್,ನಾ.ರಾ.ಭರತ ರೆಡ್ಡಿ, ಡಾ.ಶ್ರಿನಿವಾಸ ಮೂರ್ತಿ ಲಪಟಾಯಿಸಿರುವುದು ಇ.ಡಿ ದಾಳಿಯಿಂದಲೇ ಸಾಬೀತಾಗಿದೆ. ಇವರು ಯಾವ ನೈತಿಕತೆ ಇಟ್ಟುಕೊಂಡು ಅಧಿಕಾರದಲ್ಲಿ ಮುಂದುವರೆಯುತ್ತಾರೆ ಎಂದು ಪ್ರಶ್ನೆ ಮಾಡಿದರು.

ತುಕಾರಾಮ್ ಸೇರಿದಂತೆ ಯಾರು ಕೂಡ ಅಧಿಕಾರದಲ್ಲಿ ಮುಂದುವರೆಯುವ ನೈತಿಕತೆ ಇಲ್ಲ. ತಮ ಸ್ಥಾನಕ್ಕೆ ಗೌರವಯುತವಾಗಿ ರಾಜೀನಾಮೆ ನೀಡಲಿ ಇಲ್ಲದಿದ್ದರೆ ಮತ



ದಾರರಿಗೆ ಹಣ ಹಂಚಿಕೆ ಮಾಡಿರುವ ಆರೋಪದ ಮೇಲೆ ಚುನಾವಣಾ ಆಯೋಗ ಸದಸ್ಯತ್ವವನ್ನು ಅನರ್ಹಗೊಳಿಸಬೇಕೆಂದು ಒತ್ತಾಯಿಸಿದರು. ಸಂಸದ ತುಕಾರಾಮ್, ಶಾಸಕರಾದ ನಾರಾಭರತ್ ರೆಡ್ಡಿ, ಡಾ.ಶ್ರೀನಿವಾಸ, ಜೆ ಎನ್ ಗಣೇಶ್ ಮನೆ ಮೇಲೆ ಇಡಿ ದಾಳಿ ಆಗಿದೆ. ತಾವು ಸಾಚಾಗಳು ಅಂತ ಇವರು ಬಹಳ ಮಾತಾಡುತ್ತಿದ್ದರು. ಮಾಡೋದು ಅನಾಚಾರ, ಮನೆ ಮುಂದೆ ಬೃಂದಾವನ ಎಂದು ವ್ಯಂಗ್ಯವಾಡಿದರು.

ಸಂಡೂರು ಉಪಚುನಾವಣೆಯಲ್ಲಿ ರಾಮುಲು ವಿರುದ್ಧ ಕಾಂಗ್ರೆಸ್ ಷಡ್ಯಂತ್ರ ಮಾಡಿತ್ತು. ತನ್ನನ್ನು ಮುಗಿಸಬೇಕೆಂದು ವಾಲ್ಮೀಕಿ ನಿಗಮದ ಹಣ ಚುನಾವಣೆಯಲ್ಲಿ ಖರ್ಚು ಮಾಡಿದ್ದರು. ವಾಲ್ಮೀಕಿ ಹಣದಿಂದ ಬಿಜೆಪಿಯನ್ನು ಕಾಂಗ್ರೆಸ್ ಸೋಲಿಸಿತು. ವಾಲ್ಮೀಕಿ ಹಗರಣ ಸಾಬೀತಾದರೆ ತುಕಾರಾಂ ಹಾಗೂ ಶಾಸಕರು ರಾಜೀನಾಮೆ ಕೊಡಬೇಕಾಗುತ್ತದೆ ಎಂದು ಎಚ್ಚರಿಸಿದರು. ರೆಡ್ಡಿಗೆ ಜಾಮೀನು, ಶಿಕ್ಷೆ ಅಮಾನತು ಕುರಿತು ಮಾತನಾಡಿದ ಅವರು, ನನಗೆ ಈಗ ತಾನೇ ರೆಡ್ಡಿಗೆ ಜಾಮೀನು ಸಿಕ್ಕ ಬಗ್ಗೆ ಮಾಹಿತಿ ಸಿಕ್ಕಿತು. ಇದರ ಬಗ್ಗೆ ಸಂಪೂರ್ಣ ಮಾಹಿತಿ ಪಡೆದು ನಾನು ಮಾತಾಡುತ್ತೇನೆ ಇದೇ ವೇಳೆ ಅವರು ತಿಳಿಸಿದರು.

ಜಾತಿ ಜನಗಣತಿಗೆ ಕೋಟ್ಯಂತರ ರೂ. ಖರ್ಚು ಮಾಡಿದರು. ಆ ಹಣ ಹೊಳೇಲಿ ಹುಣಸೇ ಹಣ್ಣು ಕಿವುಚಿದಂತಾಗುತ್ತದೆ ಎಂದು ಅವರೇ ಹೇಳುತ್ತಿದ್ದರು. ಈಗ ಅವರೇ ಮರುಸರ್ವೆಗೆ ಹೈಕಮಾಂಡ್ ಮುಂದೆ ಒಪ್ಪಿ ಬಂದಿದ್ದಾರೆ. ಕಾಲ್ತುಳಿತ ದುರಂತವನ್ನು ಮರೆಮಾಚಲು ಮಾಡಲು ಮರುಸರ್ವೆ ಮಾಡಲು ಮುಂದಾಗಿದ್ದಾರೆ ಎಂದು ಶ್ರಿರಾಮುಲು ಟೀಕಿಸಿದರು.

# ಟೀಂ ಇಂಡಿಯಾಗೆ ಸಿಗಲಿದೆ 12.30 ಕೋಟಿ

**ನವದೆಹಲಿ, ಜೂ.11–** ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಮೊದಲೆರಡು ಆವೃತ್ತಿಯಲ್ಲಿ ರನ್ನರ್ ಅಪ್ ಆಗಿದ್ದ ಭಾರತ ತಂಡವು ಈ ಬಾರಿ ಫೈನಲ್ ಹಂತಕ್ಕೆ ಅರ್ಹತೆ ಪಡೆಯದಿದ್ದರೂ ಕೂಡ ಅಂತಾರಾಷ್ಟ್ರಿಯ ಕ್ರಿಕೆಟ್ ಸಮಿತಿ ವತಿಯಿಂದ 12.30 ಕೋಟಿ ಬಹುಮಾನ ಮೊತ್ತ ಸಿಗಲಿದೆ. ಇಂಗ್ಲೆಂಡ್‌ನ ಲಾರ್ಡ್‌ನಲ್ಲಿ ಇಂದಿನಿಂದ ಪ್ಯಾಟ್ ಕಮಿನ್ ಸಾರಥ್ಯದ ಆಸ್ಟೆಲಿಯಾ ಹಾಗೂ ಟಿಂಬಾ ಬವುಮಾ ನಾಯಕತ್ವದ ದಕ್ಷಿಣ ಆಫ್ರಿಕಾ ನಡುವೆ 3ನೇ ಆವೃತ್ತಿಯ ಡಬ್ಲ್ಯುಟಿಸಿ ಫೈನಲ್ ಪಂದ್ಯ ನಡೆಯುತ್ತಿದ್ದು, ಈ ಪಂದ್ಯದಲ್ಲಿ ಗೆದ್ದ ತಂಡಕ್ಕೆ 30.88 ಕೋಟಿ ಸಿಕ್ಕರೆ, ರನ್ನರ್ ಅಪ್ ತಂಡಕ್ಕೆ 18.50 ಕೋಟಿ ಸಿಗಲಿದ್ದು, 3ನೇ ಸ್ಥಾನಿಯಾಗಿರುವ ಭಾರತಕ್ಕೆ 12.30 ಕೋಟಿ ಸಿಗಲಿದೆ.

ಅಂತಾರಾಷ್ಟ್ರಿಯ ಕ್ರಿಕೆಟ್ ನಲ್ಲಿ ಚೊಚ್ಚಲ ಐಸಿಸಿ ಟ್ರೋಫಿ ಗೆಲ್ಲುವ ಮೂಲಕ ಟ್ರೋಫಿ ಬರ ನೀಗಿಸಿಕೊಳ್ಳುವತ್ತ ದಕ್ಷಿಣ ಆಫ್ರಿಕಾ ಹೆಜ್ಜೆ ಇಟ್ಟಿದ್ದರೆ, ಸತತ ಎರಡನೇ ಬಾರಿ




ಚಾಂಪಿಯನ್ ಪಟ್ಟ ಅಲಂಕರಿಸುವ ಲೆಕ್ಕಾಚಾರವನ್ನು ಆಸ್ಟೆಲಿಯಾ ಹಾಕಿಕೊಂಡಿದೆ. ಸತತ 3ನೇ ಬಾರಿಗೆ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ಆಡಬೇಕೆಂಬ ಕನಸು ಹೊತ್ತಿದ್ದ ಭಾರತ ತಂಡವು ತವರಿನಲ್ಲಿ ನ್ಯೂಜಿಲೆಂಡ್ ವಿರುದ್ಧ 0–3 ರಿಂದ ವೈಟ್‌ವಾಶ್ ಹಾಗೂ ಬಾರ್ಡರ್– ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ3–1 ರಿಂದ ಸೋಲು ಕಂಡಿದ್ದರಿಂದ ಟ್ರೋಫಿ ಸುತ್ತು ತಲುಪುವಲ್ಲಿ ಟೀಂ ಇಂಡಿಯಾ ಎಡವಿದೆ.

ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ನ ಮೊದಲ ಆವೃತ್ತಿಯಲ್ಲಿ ವಿರಾಟ್ ಕೊಹ್ಲಿ ಸಾರಥ್ಯದ ಟೀಂಇಂಡಿಯಾವು ನ್ಯೂಜಿಲೆಂಡ್ (2021) ವಿರುದ್ಧ ಹಾಗೂ 2023ರಲ್ಲಿ ಹಿಟ್ ಮ್ಯಾನ್ ರೋಹಿತ್ ಶರ್ಮಾ ಸಾರಥ್ಯದಲ್ಲಿ ಆಸ್ಟ್ರೆ?ಲಿಯಾ ವಿರುದ್ಧ ಭಾರತ ತಂಡವು ಸೋಲು ಕಾಣುವ ಮೂಲಕ ಟೆಸ್ಟ್ ಚಾಂಪಿಯನ್ ಶಿಪ್ ಗೆಲ್ಲುವಲ್ಲಿ ಮುಗ್ಗರಿಸಿತ್ತು.

# ಕಾಲ್ತುಳಿತದಂತಹ ಅನಾಹುತ ತಪ್ಪಿಸಲು AI ಮೊರೆ ಹೋದ ಗುಜರಾತ್

**ಅಹಮದಾಬಾದ್,ಜೂ.11–**ಚಿನ್ನಸ್ವಾಮಿ ಸ್ಟೆಡಿಯಂ ಬಳಿ ಸಂಭವಿಸಿದ ಕಾಲ್ತುಳಿತದಲ್ಲಿ 11 ಮಂದಿ ಅಮಾಯಕ ಜೀವಗಳು ಬಲಿಯಾದ ಪ್ರಕರಣ ಇನ್ನು ಹಸಿಯಾಗಿರುವಾಗಲೇ ಜನದಟ್ಟಣೆ ಸಂದರ್ಭದಲ್ಲಿ ಸಂಭವಿಸಬಹುದಾದ ಅನಾಹುತಗಳನ್ನು ತಪ್ಪಿಸಲು ಗುಜರಾತ್ ಕೃತಕ ಬುದ್ಧಿಮತ್ತೆಯ ಮೊರೆ ಹೋಗಿದೆ. ಜೂ. 27 ರಂದು ಅಹಮದಾಬಾದ್‌ನಲ್ಲಿ ನಡೆಯಲಿರುವ ಮುಖ್ಯ ರಥಯಾತ್ರೆ ಮೆರವಣಿಗೆಯಲ್ಲಿ ಕಾಲ್ತುಳಿತದಂತಹ ಪರಿಸ್ಥಿತಿಯನ್ನು ತಡೆಗಟ್ಟಲು ಗುಜರಾತ್ ಪೊಲೀಸರು ಡ್ರೋನ್‌ಗಳೊಂದಿಗೆ ಕೃತಕ ಬುದ್ಧಿಮತ್ತೆ ಆಧಾರಿತ ಕಣ್ಗಾವಲು ವ್ಯವಸ್ಥೆಯನ್ನು ನಿಯೋಜಿಸಲಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈ ಕಾರ್ಯಕ್ರಮಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ನಿರೀಕ್ಷೆಯಿರುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ.ಬೆಂಗಳೂರಿನಲ್ಲಿ ನಡೆದ ಘಟನೆ ಸೇರಿದಂತೆ ಸಾಮೂಹಿಕ ಸಭೆಗಳನ್ನು ಒಳಗೊಂಡ ಇತ್ತೀಚಿನ ಘಟನೆಗಳಿಂದ ಗಮನದಲ್ಲಿಟ್ಟುಕೊಂಡು, ಅಹಮದಾಬಾದ್ ಅಪರಾಧ ವಿಭಾಗವು –ಚಾಲಿತ ದೃಶ್ಯ ವಿಶ್ಲೇಷಣಾ ಸಾಫ್‌ವೇರ ಅನ್ನು ನಿಯೋಜಿಸಲಿದೆ, ಇದು ಜನಸಂದಣಿಯ ಮಾದರಿಗಳ ಬಗ್ಗೆ ಪೊಲೀಸರಿಗೆ ಮುಂಚಿತವಾಗಿ ಎಚ್ಚರಿಕೆ ನೀಡುತ್ತದೆ ಎಂದು ಸಹಾಯಕ ಪೊಲೀಸ್ ಆಯುಕ್ತ ಭರತ್ ಪಟೇಲ್ ತಿಳಿಸಿದ್ದಾರೆ.

ಜೂನ್ 4 ರಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರಿಡಾಂಗಣದ ಮುಂದೆ ಆರ್‌ಸಿಬಿ ತಂಡದ ಐಪಿಎಲ್ ವಿಜಯೋತ್ಸವದಲ್ಲಿ ಭಾಗವಹಿಸಲು ಹೆಚ್ಚಿನ ಸಂಖ್ಯೆಯ ಜನರು ಸೇರಿದ್ದ ಕಾಲ್ತುಳಿತದ ನಂತರ ಹನ್ನೊಂದು ಜನರು ಸಾವನ್ನಪ್ಪಿದರು ಮತ್ತು 56 ಜನರು ಗಾಯಗೊಂಡಿದ್ದರು.ಕೆಲವು ರಾಜ್ಯಗಳಲ್ಲಿ ಸಂಭವಿಸಿದ ಕಾಲ್ತುಳಿತಗಳನ್ನು ಗಮನದಲ್ಲಿಟ್ಟುಕೊಂಡು, ದೃಶ್ಯ ದತ್ತಾಂಶದ ನೈಜ–ಸಮಯದ ಸಂಸ್ಕರಣೆಯ ಮೂಲಕ ರಥಯಾತ್ರೆಯ ಸಮಯದಲ್ಲಿ ಜನಸಂದಣಿಯನ್ನು ಮೇಲ್ವಿಚಾರಣೆ ಮಾಡಲು ಮತ್ತು ನಿರ್ವಹಿಸಲು – ಚಾಲಿತ ಸಾಫ್‌ವೇರ್ ಅನ್ನು ಬಳಸಲು ನಾವು ನಿರ್ಧರಿಸಿದ್ದೇವೆ ಎಂದು ಪಟೇಲ್ ವರದಿಗಾರರಿಗೆ ತಿಳಿಸಿದರು.

ಪೊಲೀಸರ ಪ್ರಕಾರ, ಜೂನ್ 27 ರಂದು ನಡೆಯಲಿರುವ ಅದ್ದೂರಿ ಕಾರ್ಯಕ್ರಮದಲ್ಲಿ 14 ರಿಂದ 15 ಲಕ್ಷ ಜನರು ಭಾಗವಹಿಸುವ ನಿರೀಕ್ಷೆಯಿದೆ. ವ್ಯವಸ್ಥೆಯಡಿಯಲ್ಲಿ, ಪೊಲೀಸ್ ನಿಯಂತ್ರಣ ಕೊಠಡಿಯಲ್ಲಿರುವ ದೃಶ್ಯ ವಿಶ್ಲೇಷಣಾ ಸಾಫ್‌ವೇರ್, ಯಾತ್ರೆಯ ಮಾರ್ಗದಲ್ಲಿ ನಿಯೋಜಿಸಲಾದ ಸಿಸಿಟಿವಿ ಕ್ಯಾಮೆರಾಗಳು ಮತ್ತು ಡ್ರೋನ್‌ಗಳಿಂದ ಲೈವ್ ವೀಡಿಯೊ ಫೀಡ್‌ಗಳನ್ನು ಸ್ವಿಕರಿಸುತ್ತದೆ ಎಂದು ಪಟೇಲ್ ಹೇಳಿದರು. ಆ ನಿರ್ದಿಷ್ಟ ಸ್ಥಳದಲ್ಲಿ ಎಷ್ಟು ಜನರು ಇದ್ದಾರೆ ಮತ್ತು ಕಡಿಮೆ ಅವಧಿಯಲ್ಲಿ ಎಷ್ಟು ಜನರು ಆಗಮಿಸುತ್ತಾರೆ ಎಂಬುದನ್ನು ಅಂದಾಜು ಮಾಡಲು ಲೈವ್ ಫೀಡ್ ಅನ್ನು ವಿಶ್ಲೇಷಿಸಲು ಸಾಫ್‌ವೇರ್ ಅನ್ನು ಪ್ರೊಗ್ರಾಮ್ ಮಾಡಲಾಗಿದೆ ಎಂದು ಅವರು ಹೇಳಿದರು.ಸಾಫ್‌ವೇರ್ ತಲೆಗಳನ್ನು ಎಣಿಸುತ್ತದೆ, ಆ ಸ್ಥಳದ ಗರಿಷ್ಠ ಸಾಮರ್ಥ್ಯವನ್ನು ಲೆಕ್ಕಹಾಕುತ್ತದೆ ಮತ್ತು ಆ ಸ್ಥಳದಲ್ಲಿ ಭವಿಷ್ಯದ ಒಳಹರಿವಿನ ಬಗ್ಗೆ ಪೊಲೀಸರನ್ನು ಎಚ್ಚರಿಸುತ್ತದೆ. ಈ ಮುಂಗಡ ಎಚ್ಚರಿಕೆಯು ಹೆಚ್ಚಿನ ಜನರು ಬರುವುದನ್ನು ತಡೆಯಲು ಆ ಸ್ಥಳಕ್ಕೆ ಬ್ಯಾರಿಕೇಡ್ ಹಾಕುವುದು ಮತ್ತು ಪ್ರದೇಶವನ್ನು ತೆರವುಗೊಳಿಸುವಂತಹ ತಕ್ಷಣದ ತಡೆಗಟ್ಟುವ ಕ್ರಮಗಳನ್ನು ತೆಗೆದುಕೊಳ್ಳಲು ನೆಲದ ಪೊಲೀಸರಿಗೆ ಎಚ್ಚರಿಕೆ ನೀಡುತ್ತದೆ ಎಂದು ಅವರು ಹೇಳಿದರು.

ಆಕ್ರಮಿತ ಸ್ಥಳಗಳ ಬಳಿ ಖಾಲಿ ಸ್ಥಳಗಳ ಬಗ್ಗೆ ಮಾಹಿತಿಯನ್ನು ಈ ವ್ಯವಸ್ಥೆಯು ಹಂಚಿಕೊಳ್ಳುತ್ತದೆ, ಕಾಲ್ತುಳಿತವನ್ನು ತಪ್ಪಿಸಲು ಜನರನ್ನು ಸ್ಥಳಾಂತರಿಸಲು ಪೊಲೀಸರಿಗೆ ಅವಕಾಶ ನೀಡುತ್ತದೆ.ಈ ವ್ಯವಸ್ಥೆಯು ಸಕಾಲಿಕ ಪ್ರತಿಕ್ರಿಯೆಯನ್ನು ಒದಗಿಸಲು, ಅಗತ್ಯವಿರುವಲ್ಲಿ ಮಾನವಶಕ್ತಿಯನ್ನು ಸ್ಥಳಾಂತರಿಸಲು ಮತ್ತು ಅಗತ್ಯವಿದ್ದರೆ ಸಂಚಾರವನ್ನು ಬೇರೆಡೆಗೆ ತಿರುಗಿಸಲು ನಮಗೆ ಸಹಾಯ ಮಾಡುತ್ತದೆ ಎಂದು ಪಟೇಲ್ ಹೇಳಿದರು. ಚಾಲಿತ ವ್ಯವಸ್ಥೆಯು ನಿರ್ದಿಷ್ಟ ಸ್ಥಳದ ಗರಿಷ್ಠ ಸಾಮರ್ಥ್ಯ, ಅದರ ಪ್ರಸ್ತುತ ಜನಸಂದಣಿ ಸಾಂದ್ರತೆ ಮತ್ತು ಭವಿಷ್ಯದ ಒಳಹರಿವನ್ನು ಲೆಕ್ಕಾಚಾರ ಮಾಡುವ ಸಾಮರ್ಥ್ಯವನ್ನು ಹೊಂದಿದೆ ಎಂದು ಅವರು ಹೇಳಿದರು.ಈಗಾಗಲೇ ಸ್ಥಾಪಿಸಲಾದ ಕ್ಯಾಮೆರಾಗಳ ಫೀಡ್‌ಗಳನ್ನು ಬಳಸಿಕೊಂಡು ಈ ವ್ಯವಸ್ಥೆಯು ಪ್ರಸ್ತುತ ಪರೀಕ್ಷೆಗಳಿಗೆ ಒಳಗಾಗುತ್ತಿದೆ.

# ಎಂಜಿನಿಯರ್ ಡಿಜಿಟಲ್ ಅರೆಸ್ಟ್: ಆರೋಪಿ ತೆಲಂಗಾಣದ ಕ್ಯಾಬಿನೆಟ್ ಸಚಿವರೊಬ್ಬರ ಸಂಬಂಧಿ

**ಬೆಂಗಳೂರು,ಜೂ.11–**ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ಎಂಜಿನಿಯರ್‌ನಿಂದ 4.8ಕೋಟಿ ರೂ.ಹಣ ಸುಲಿಗೆ ಮಾಡಿದ್ದ ಪ್ರಕರಣದಲ್ಲಿ ಬಂಧಿತನಾಗಿರುವ ಆರೋಪಿ ಈಶ್ವರ್ ಸಿಂಗ್ ತೆಲಂಗಾಣ ರಾಜ್ಯದ ಕ್ಯಾಬಿನೆಟ್ ಸಚಿವರೊಬ್ಬರ ಸಂಬಂಧಿ ಎಂಬುವುದು ಆಗ್ನೇಯ ವಿಭಾಗದ ಸೆನ್ ಠಾಣೆ ಪೊಲೀಸರ ತನಿಖೆಯಿಂದ ಗೊತ್ತಾಗಿದೆ. ಆರೋಪಿ ಈಶ್ವರ್‌ಸಿಂಗ್ ಹೈದರಾಬಾದ್ ಕಾರ್ಪೋರೇಷನ್ ಚುನಾವಣೆಗೆ ಸ್ಪರ್ಧಿಸಲು ಸಿದ್ದತೆ ಮಾಡಿಕೊಳ್ಳುತ್ತಿದ್ದನು.ಈತ ಕ್ಯಾಸಿನೋ ಚಟಕ್ಕೆ ದಾಸನಾಗಿ 25 ಲಕ್ಷ ರೂ. ಕಳೆದುಕೊಂಡಿದ್ದಾನೆ.

ಈ ವಿಷಯ ತಿಳಿದು ಕ್ಯಾಬಿನೆಟ್ ಸಚಿವರು ಹಲವಾರು ಭಾರಿ ಈತನನ್ನು ಕರೆದು ಬುದ್ದಿವಾದ ಹೇಳಿದರೂ ಸಹ ತನ್ನ ಚಾಳಿ ಬಿಡದೆ ಮೂರು ವರ್ಷದಲ್ಲಿ ಬರೋಬ್ಬರಿ ಶ್ರಿಲಂಕಾಗೆ 33 ಭಾರಿ ಕ್ಯಾಸಿನೋಗೆ ಹೋಗಿ ಲಕ್ಷಾಂತರ ಹಣ ಕಳೆದುಕೊಂ



ಡಿರುವುದು ಗೊತ್ತಾಗಿದೆ. ಬ್ಯಾಂಕ್ ಪ್ರತಿನಿಧಿ ಎಂದು ಎಂಜಿನಿಯರ್ ಮಂಜುನಾಥ್ ಅವರನ್ನು ಪರಿಚಯಿಸಿಕೊಂಡಿದ್ದ ಆರೋಪಿಗಳ ಪೈಕಿ ಈಶ್ವರ್‌ಸಿಂಗ್ ಎಂಜಿನಿಯರ್‌ನಿಂದ ಪಡೆದ ಹಣವನ್ನು ತನ್ನ ಡ್ರೈವರ್ ಅಕೌಂಟ್‌ಗೆ ಹಾಕಿಸಿಕೊಂಡು ಜಾಣತನ ಮೆರೆದಿದ್ದನು.

ಆರೋಪಿಗಳು ಎಷ್ಟೆ ಚಾಲಾಕಿ ಗಳಾದರೂ ಸಹ ಪೊಲೀಸರು ಅವರ ಜಾಡು ಹಿಡಿದು ಆಂಧ್ರಪ್ರದೇಶದ ವಿಮಾನ ನಿಲ್ದಾಣದಲ್ಲಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಈ ಪ್ರಕರಣದಲ್ಲಿ ತಲೆಮರೆಸಿಕೊಂಡಿರುವ ಉಳಿದ ಆರೋಪಿಗಳಿಗಾಗಿ ದೆಹಲಿ,ವಿಶಾಖಪಟ್ಟಣ,ಚೆನ್ನೈ ಸೇರಿದಂತೆ ವಿವಿದೆಡೆ ತನಿಖೆ ಮುಂದುವರೆಸಿದ್ದಾರೆ. ನಿವೃತ್ತ ಎಂಜಿನಿಯರ್ ಮಂಜುನಾಥ್ ದಂಪತಿಯನ್ನು ಹೆದರಿಸಿ ನಿಮ ಕ್ರೆಡಿಟ್ ಕಾರ್ಡ್ ಲಿಮಿಟ್ ಕ್ರಾಸ್ ಆಗಿದ್ದು, ಓವರ್ ಡ್ಯೂ ಕೂಡ ಆಗಿರುವುದರಿಂದ ನಿಮ ವೈಯಕ್ತಿಕ ವಿವರಗಳನ್ನು ಕೊಡಬೇಕೆಂದು ಹೇಳಿ ಅವುಗಳನ್ನು ಪಡೆದುಕೊಂಡು ನಂತರ ದಿನಗಳಲ್ಲಿ ಡಿಜಿಟಲ್ ಅರೆಸ್ಟ್ ಮಾಡಿ ಹಂತ ಹಂತವಾಗಿ 4.79 ಕೋಟಿ ರೂ. ಹಣವನ್ನು ವರ್ಗಾವಣೆ ಮಾಡಿಕೊಂಡಿದ್ದರ ಜೊತೆಗೆ ಆಸ್ತಿ–ಪಾಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಸಹ ಆರೋಪಿಗಳು ಪಡೆದುಕೊಂಡು ಇದೀಗ ಪೊಲೀಸರ ಬಲೆಗೆ ಬಿದ್ದಿದ್ದಾರೆ.

# ವಿಶೇಷ ಸಚಿವ ಸಂಪುಟ ಸಭೆ: ನಂದಿಬೆಟ್ಟಕ್ಕೆ ಮೂರು ದಿನ ಪ್ರವೇಶ ನಿರ್ಬಂಧ

**ಚಿಕ್ಕಬಳ್ಳಾಪುರ,ಜೂ.11–** ನಂದಿಗಿರಿಧಾಮದಲ್ಲಿ ಇದೇ 19 ರಂದು ನಡೆಯಲಿರುವ ಸಚಿವ ಸಂಪುಟ ಸಭೆ ಹಿನ್ನೆಲೆಯಲ್ಲಿ ಮೂರು ದಿನಗಳ ಕಾಲ ಪ್ರವಾಸಿಗರಿಗೆ ನಂದಿ ಬೆಟ್ಟ ಪ್ರವೇಶ ನಿರ್ಗಮಿಸಲಾಗಿದೆ.

ಇದೇ 16 ರ ಸಂಜೆ 5 ಗಂಟೆಯಿಂದ 20 ರ ಬೆಳಿಗ್ಗೆ 5 ಗಂಟೆವರೆಗೂ ಸಾರ್ವಜನಿಕರ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ಎನ್.ರವೀಂದ್ರ ಆದೇಶ ಹೊರಡಿಸಿದ್ದಾರೆ.

ನಂದಿಗಿರಿಧಾಮದ ಮೇಲ್ಭಾಗದಲ್ಲಿರುವ ವಸತಿ ಕೊಠಡಿಗಳನ್ನು ಸಹ ಮುಂಗಡ ಕಾಯ್ದಿರಿಸುವಿಕೆಗೂ ಕೂಡ ಸ್ಥಗಿತಗೊಳಿಸಲಾಗಿದೆ. ಇದೇ ಮೊದಲ ಬಾರಿಗೆ ನಂದಿಬೆಟ್ಟದಲ್ಲಿ ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದ್ದು, ಸಭೆಗೆ ಬೇಕಾದ ಅಗತ್ಯ ಸಿದ್ಧತೆಗಳ ಸಲುವಾಗಿ ಮೂರು ದಿನಗಳ ಮೊದಲೇ ಪ್ರವಾಸಿಗರ ಪ್ರವೇಶ ಹಾಗೂ ವಾಹನಗಳ ಸಂಚಾರಕ್ಕೆ ಬ್ರೆಕ್ ಹಾಕಲಾಗಿದೆ.

ಸಚಿವ ಸಂಪುಟ ಸಭೆಗೆ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಸಚಿವರು, ಶಾಸಕರು, ಇಲಾಖಾ ಮುಖ್ಯಸ್ಥರು, ಅಧಿಕಾರಿಗಳು ಆಗಮಿಸಲಿದ್ದಾರೆ. ನಂದಿಗಿರಿಧಾಮಕ್ಕೆ ಹೋಗುವುದಕ್ಕೆ ಮತ್ತು ಬರುವುದಕ್ಕೆ ಒಂದೇ ರಸ್ತೆ ಇರುವುದರಿಂದ ವಾಹನದ



ಟ್ಟಣೆ ಹೆಚ್ಚಾಗಿರುತ್ತದೆ. ಜೊತೆಗೆ ಬೆಟ್ಟಗಳಲ್ಲಿ ಕಡಿದಾದ ತಿರುವುಗಳಿ ರುವುದರಿಂದ ರಸ್ತೆಗಳಲ್ಲಿ ವಾಹನ ಮತ್ತು ಪ್ರವಾಸಿಗರನ್ನು ನಿಯಂತ್ರಿಸುವುದು ಕಷ್ಟವಾ ಗಿರುವುದರಿಂದ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ.

# ಅಸಂಘಟಿತ ಕಾರ್ಮಿಕರಿಗೆ ಕಿಟ್ ವಿತರಣೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.11–** ಅಸಂಘಟಿತ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಲ್ಲಿ ನೊಂದಾಯಿತ ಕಾರ್ಮಿಕರಿಗೆ ಕಿಟ್‌ಗಳನ್ನು ಶಾಸಕರಾದ ಜಿ. ಹಂಪಯ್ಯ ನಾಯಕ್ ಸಾಹುಕಾರ್ ಅವರು ಕಿಟ್‌ಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, "ಕಾರ್ಮಿಕ ಇಲಾಖೆಯ ಸಚಿವರಾದ ಸಂತೋಷ್ ಲಾಡ್ ಅವರು ಕಾರ್ಮಿಕರ ಅಭಿವೃದ್ಧಿಗೆ ಹತ್ತಾರು ಯೋಜನೆಗಳನ್ನು ಜಾರಿಗೆ ಮಾಡಿ ಕಾರ್ಮಿಕರ ಬಗ್ಗೆ ಅಪಾರವಾದ ನಮ್ಮ ಸರ್ಕಾರ ಕಾಳಜಿಯನ್ನು ಹೊಂದಿದೆ ಎಂದು ಸಾಬೀತುಪಡಿಸಿದ್ದಾರೆ," ಎಂದರು.

ಕಾರ್ಮಿಕರ ಬೇಡಿಕೆಗಳ ಕುರಿತು ಪ್ರಸ್ತಾಪಿಸಿದ ಶಾಸಕರು, "ನೀವುಗಳು ಇಟ್ಟಿರುವ ಬೇಡಿಕೆಯನ್ನು ನಮ್ಮ ಸಚಿವರಾದ ಎನ್.ಎಸ್. ಬೋಸರಾಜು ಅವರೊಂದಿಗೆ ಚರ್ಚಿಸಿ ಮುಂದಿನ ದಿನಗಳಲ್ಲಿ ನಿಮ್ಮ ಬೇಡಿಕೆಯನ್ನು ಆದಷ್ಟು ಬೇಗನೆ ಈಡೇರಿಸಲಾಗುವುದು. ಕಾರ್ಮಿಕರಿಗೆ ನಿವೇಶನದ ಬಗ್ಗೆ ಸಚಿವರೊಂದಿಗೆ ಚರ್ಚಿಸಲಾಗುವುದು," ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕಾರ್ಮಿಕ ಇಲಾಖೆಯ ಅಧಿಕಾರಿ ಮಲ್ಲಪ್ಪ, ಕಾರ್ಮಿಕ ಸಂಘಟನೆಯ ಮುಖಂಡರಾದ ರುದ್ರಪ್ಪ ನಾಯಕ್, ಯಂಕಣ್ಣ ಪೋತ್ನಾಳ್, ಪರಶುರಾಮ್ ಬಾಗಲವಾಡ, ರಾಮಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರಾಯಚೂರು ಇಂಡಸ್ಟ್ರಿಯಲ್ ಗ್ರೋತ್ ಸೆಂಟರಗೆ ಮೂಲಭೂತ ಸೌಕರ್ಯ ಕಲ್ಪಿಸಲು ಕಟ್ಟುನಿಟ್ಟಿನ ನಿರ್ದೇಶನ



**ಯುವ ಮಾರ್ಗ ಸುದ್ದಿ**

**ರಾಯಚೂರ,ಜೂ. 11–** ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷರಾದ

ಟಿ.ಎ.ಶರವಣ ಹಾಗೂ ಸಮಿತಿಯ ಸದಸ್ಯರ ತಂಡವು ಬುಧುವಾರ ರಾಯಚೂರು ನಗರದಲ್ಲಿರುವ ಇಂಡಸ್ಟ್ರಿಯಲ್ ಗ್ರೋತ್ ಸೆಂಟರ್‌ಗೆ ಭೇಟಿ ನೀಡಿತು.

ಕೃಷಿ ವಿಜ್ಞಾನ ವಿವಿ ಆವರಣದಿಂದ ಹೊರಟು, ದೇವಸಗೂರ ರಸ್ತೆಯ ಮಾರ್ಗವಾಗಿ ಒಡ್ಲೂರ ರಸ್ತೆ ಬಳಿಯ ಕೆಐಎಡಿಬಿ ಪ್ರದೇಶಕ್ಕೆ ಆಗಮಿಸಿದ ಶಾಸಕರು, ಅಲ್ಲಿನ ರಸ್ತೆಗಳು ಸರಿ ಇಲ್ಲದ್ದನ್ನು, ಮೂಲ ಸೌಲಭ್ಯಗಳು ಕಾಣದೇ ಇರುವುದನ್ನು ಕಂಡು ಅಸಮಧಾನ ವ್ಯಕ್ತಪಡಿಸಿದರು. 'ಇಲ್ಲಿನ ಕಾರ್ಖಾನೆಗಳ ವಾಸ್ತವ ಪರಿಸ್ಥಿತಿ ಏನಿದೆ ಎಂದು ಗೊತ್ತಿದೆಯಾ. ಇಲ್ಲಿಗೆ ಆಗಾಗ ಭೇಟಿ ಕೊಡ್ತೀರಾ' ಎಂದು ಕೆಐಎಡಿಬಿ ಎಂಜಿನಿಯರುಗಳಿಗೆ ಸಮಿತಿಯ ಅಧ್ಯಕ್ಷರು ಪ್ರಶ್ನಿಸಿದರು. ಈ ಪ್ರದೇಶದಲ್ಲಿನ ಸೌಲಭ್ಯಗಳು, ಕುಂದುಕೊರತೆಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಪರಿಶೀಲನೆ ಮಾಡಿದ ಸಮಿತಿಯ ಅಧ್ಯಕ್ಷರು, ಇಲ್ಲಿ ಯಾವ ಯಾವ ಸಮಸ್ಯೆಗಳಿವೆ. ಅದಕ್ಕೆ ಕೆಐಎಡಿಬಿ ಏನು ಮಾಡುತ್ತಿದೆ ಎಂಬುದರ ಕುರಿತು ಕ್ರಮ ವಹಿಸಿದ ಬಗ್ಗೆ ವರದಿ ನೀಡಬೇಕು ಎಂದು ಕೆಐಎಡಿಬಿ ಎಂಜಿನಿಯರುಗಳಿಗೆ 15 ದಿನಗಳ ಗಡುವು ವಿದಿಸಿದರು.

ಈ ಪ್ರದೇಶದಲ್ಲಿ ಅತ್ಯಂತ ಅವಶ್ಯಕವಾಗಿರುವ ನೀರಿನ ಸಂಪನ್ಮೂಲ ಕಲ್ಪಿಸಬೇಕು. ಇದಕ್ಕೆ ಏನಾದರು ಅಡೆತಡೆ ಇದ್ದರೆ ತಿಳಿಸಿರಿ ಎಂದು ಅಧ್ಯಕ್ಷರು ಎಂಜಿನಿಯರುಗಳಿಗೆ ನಿರ್ದೇಶನ ನೀಡಿದರು.

ರಾಯಚೂರ ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರಾಯಚೂರ ಗ್ರೋಥ್ ಸೆಂಟರ್ ಕೈಗಾರಿಕಾ ಪ್ರದೇಶಗಳಲ್ಲಿ 150ಕ್ಕು ಹೆಚ್ಚು ಕೈಗಾರಿಕೆಗಳು ಕಾರ್ಯ ನಿರ್ವಹಿಸುತ್ತಿವೆ. ಕಾರ್ಮಿಕರು, ಸಾರ್ವಜನಿಕರಿಗೆ ನೀರು ಸರಬರಾಜು ಮತ್ತು ರಸ್ತೆ, ಬೀದಿ ದೀಪ, ಚರಂಡಿಯಂತಹ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ ಹಾಗೂ ಕೆಮಿಕಲ್ ನಿರ್ವಹಣೆ ಸರಿಯಾಗಿ ಮಾಡುವ ಬಗ್ಗೆ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧ್ಯಕ್ಷರೊಂದಿಗೆ ಚರ್ಚಿಸಿದರು.

ಫಾರ್ಮಾ ಮತ್ತು ಕೆಮಿಕಲ್ ಕಂಪನಿಗಳಿಗೆ ಕೆಐಎಡಿಬಿ ನಲ್ಲಿ ಪ್ಲಾಟ್ ನೀಡಲಾಗಿದೆ ವಿನಃ ಇಲ್ಲಿ ಆರಂಭದಲ್ಲಿಯೇ ಆಗಬೇಕಾದ ಮೂಲಭೂತ ಸೌಕರ್ಯಗಳು ಕಳೆದ 19 ವರ್ಷಗಳಿಂದ ಆಗಿಲ್ಲ. ಇಲ್ಲಿ ರಸ್ತೆ ಸರಿ ಇಲ್ಲ. ಬೀದಿ ದೀಪ ಇಲ್ಲ. ಈ ಲೇಔಟ್ ನಿರ್ಮಾಣಕ್ಕೆ ಈ ಹಿಂದೆ 120 ಕೋಟಿ ಖರ್ಚಾಗಿದೆ. ಏನೂ ಪ್ರಯೋಜನವಾಗಿಲ್ಲ ಎಂದು ಜಿಲ್ಲಾ ವಾಣಿಜ್ಯೋದಮ ಮಂಡಳಿಯ ತ್ರಿವಿಕ್ರಮ ಜೋಶಿ ಹಾಗೂ ಇತರರು ತಿಳಿಸಿ, ನಾನಾ ಬೇಡಿಕೆಗಳ ಮನವಿಯನ್ನು ಅಧ್ಯಕ್ಷರಿಗೆ ಸಲ್ಲಿಸಿದರು.

*ಸಾರ್ವಜನಿಕರಿಂದ ಅಸಮಾಧಾನ:* ಇಲ್ಲಿನ 15 ಕೆಮಿಕಲ್ ಫ್ಯಾಕ್ಟರಿಗಳ ನೀರನ್ನು ಕೆರೆಗೆ ಬಿಡಲಾಗಿದೆ. ಈ ನೀರು ಬಿಟ್ಟು ಸುಮಾರು 2000 ಜಮೀನಿನ ಮಣ್ಣು ಹಾಳಾಗಿದೆ. ಪ್ರತಿ ದಿನ ನಾಲ್ಕಾರು ಎಮ್ಮೆಗಳು ಸಾಯುತ್ತಿವೆ. ಈ ಇಂಡಸ್ಟ್ರಿಗಳು ಪಕ್ಕದ ಜಮೀನುಗಳಿಗೆ ಸರ್ವೀಸ್ ರಸ್ತೆ ಬಿಡದ ಹಾಗೆ ಹದ್ದು ಬಸ್ತ್ ಮಾಡಿಕೊಂಡಿವೆ. ರಾತ್ರಿ ವೇಳೆ ಕೆಮಿಕಲ್ ತಂದು ಸುರುವುದರಿಂದ ವಿಪರೀತ ಕೆಟ್ಟ ವಾಸನೆ ಬರುತ್ತಿದೆ. ಮಕ್ಕಳು ಇಲ್ಲಿ ನಿದ್ದೆ ಮಾಡದಂತಹ ದುಸ್ಥಿತಿ ಎದುರಾಗಿದೆ ಎಂದು ಅಲ್ಲಿನ ಸ್ಥಳೀಯ ನಾಗರಿಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಇಲ್ಲಿನ ಸಮಸ್ಯೆಗಳ ಬಗ್ಗೆ ಗೊತ್ತಾಗಿದ್ದರಿಂದಲೇ ಸಮಿತಿಯು ರಾಯಚೂರಿಗೆ ಬಂದಿದೆ. ಇಲ್ಲಿನ ಸಮಸ್ಯೆಗಳನ್ನು ಹಂತಹಂತವಾಗಿ ಸರಿಪಡಿಸಲು ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಅಧ್ಯಕ್ಷರು ತಿಳಿಸಿದರು.

ಈ ವೇಳೆ ಸಮಿತಿಯ ಸದಸ್ಯರು ಆಗಿರುವ ವಿಧಾನ ಪರಿಷತ್ ಶಾಸಕರಾದ ನಿರಾಣಿ ಹನುಮಂತಪ್ಪ ರುದ್ರಪ್ಪ, ಪ್ರತಾಪ ಸಿಂಹ ನಾಯಕ ಕೆ., ಡಿ ಎಸ್ ಅರುಣ, ಕೆ.ಎಸ್.ನವೀಣ, ಮಂಜುನಾಥ ಭಂಡಾರಿ, ತಿಪ್ಪಣ್ಣಪ್ಪ ಕಮಕನೂರ, ರಾಯಚೂರಿನ ವಿಧಾನ ಪರಿಷತ್ ಶಾಸಕರಾದ ವಸಂತಕುಮಾರ, ವಿಧಾನ ಪರಿಷತ್ ಕಾರ್ಯದರ್ಶಿ ಕೆ ಆರ್ ಮಹಾಲಕ್ಷ್ಮಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಕೆಐಎಡಿಬಿಯ ಅಧಿಕಾರಿಗಳು ಇದ್ದರು.

# ಜನಾರ್ಧನ ರೆಡ್ಡಿಗೆ ಬಿಗ್ ರಿಲೀಫ್ ಕೊಟ್ಟ ಹೈಕೋರ್ಟ್

**ಹೈದರಾಬಾದ್,ಜೂ.11–**ಅಕ್ರಮ ಗಣಿಗಾರಿಕೆಯಲ್ಲಿ ಮಾಜಿ ಸಚಿವ ಗಾಲಿ ಜನಾರ್ಧನ ರೆಡ್ಡಿಗೆ ತೆಲಂಗಾಣ ಹೈಕೋರ್ಟ್ ಹಲವು ಷರತ್ತುಗಳನ್ನು ವಿಧಿಸಿ ಜಾಮೀನು ನೀಡಿದೆ. ಸಿಬಿಐ ನ್ಯಾಯಾಲಯ ವಿಧಿಸಿದ್ದ ಏಳು ವರ್ಷ ಜೈಲು ಶಿಕ್ಷೆಗೆ ಗುರಿಯಾಗಿದ್ದ ಜನಾರ್ಧನ ರೆಡ್ಡಿ ಅವರು ಸಿಬಿಐ ನ್ಯಾಯಾಲಯದ ಆದೇಶ ಪ್ರಶ್ನಿಸಿ ತೆಲಂಗಾಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಮೂರ್ತಿಗಳು ಶಿಕ್ಷೆಗೆ ತಡೆಯಾಜ್ಞೆ ನೀಡಿ ಹತ್ತು ಲಕ್ಷ ರೂ. 2 ಶೂರಿಟಿ ಹಾಗೂ ಪಾಸ್‌ಪೋರ್ಟ್‌ಗಳನ್ನು ನೀಡುವುದೂ ಸೇರಿದಂತೆ ಕೆಲವು ಷರತ್ತುಗಳನ್ನು ವಿಧಿಸಿ ಜಾಮೀನು ಮಂಜೂರು ಮಾಡಿದ್ದಾರೆ.

ಜನಾರ್ಧನ ರೆಡ್ಡಿಯವರು ದೇಶ ಬಿಟ್ಟು ಹೋಗದಂತೆ ತೆಲಂಗಾಣ ಹೈಕೋರ್ಟ್ ಆದೇಶ ನೀಡಲಾಗಿದೆ. ಶಾಸಕ ಸ್ಥಾನವನ್ನು ಕಳೆದುಕೊಂಡಿದ್ದ ಜನಾರ್ಧನ ರೆಡ್ಡಿಯವರಿಗೆ ಈ ಆದೇಶದಿಂದ ನಿರಾಳರಾಗಿದ್ದು, ಸಧ್ಯದಲ್ಲೆ ಜೈಲಿನಿಂದ ಹೊರ ಬರಲಿದ್ದಾರೆ.





ಪ್ರಕರಣದಲ್ಲಿ ಇನ್ನೂ ಹಲವರು ಶಿಕ್ಷೆಗೆ ಗುರಿಯಾಗಿದ್ದು ಅವರ ಅರ್ಜಿಯ ವಿಚಾರಣೆ ಸದ್ಯದಲ್ಲೆ ನಡೆಯಲಿದೆ.

# ಮಾನ್ವಿ, ಸಿರವಾರ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.11–** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್.ಎಸ್. ಬೋಸರಾಜು ಮತ್ತು ಶಾಸಕ ಹಂಪಯ್ಯ ನಾಯಕ ಅವರು ಮಾನ್ವಿ ಹಾಗೂ ಸಿರವಾರ ತಾಲ್ಲೂಕುಗಳಲ್ಲಿನ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಇಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

ಸಚಿವರು ಹಾಗೂ ಶಾಸಕರು ನಿರ್ಮಿತಿ ಕೇಂದ್ರ, ಕ್ಯಾಶ್ಯೂಟೆಕ್, ಕೆಆರ್‌ಡಿಎಲ್, ಲೋಕೋಪಯೋಗಿ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ಲ್ಯಾಂಡ್ ಆರ್ಮಿ, ಅಮೃತ–2 ಕುಡಿಯುವ ನೀರಿನ ಯೋಜನೆ ಸೇರಿದಂತೆ ವಿವಿಧ ಇಲಾಖೆ ಮತ್ತು ಏಜೆನ್ಸಿಗಳ ಅಭಿವೃದ್ಧಿ ಕಾಮಗಾರಿಗಳ ಕುರಿತು ಮಾಹಿತಿ ಪಡೆದರು. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಡಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳನ್ನು ತ್ವರಿತವಾಗಿ ಮತ್ತು ಗುಣಮಟ್ಟದೊಂದಿಗೆ ಪೂರ್ಣಗೊಳಿಸುವಂತೆ ಸೂಚಿಸಲಾಯಿತು.

**ಅಧಿಕಾರಿಗಳಿಗೆ ಎಚ್ಚರಿಕೆ:**ಸಭೆಯಲ್ಲಿ ಸರಿಯಾದ ಮಾಹಿತಿ ನೀಡದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಸಚಿವರು, "ನಿಮಗೆ ಕೆಲಸದ ಮೇಲೆ ಜವಾಬ್ದಾರಿಯಿಲ್ಲ. ಜವಾಬ್ದಾರಿಯಿದ್ದರೆ ಕೆಲಸಗಳು ಈಗಾಗಲೇ ಮುಗಿಯುತ್ತಿದ್ದವು," ಎಂದು ಹೇಳಿದರು. ಕಾಮಗಾರಿಗಳ ನಿರ್ವಹಣೆಯಲ್ಲಿ ಕಳಪೆ ಗುಣಮಟ್ಟ ಅಥವಾ ಲೋಪ ಕಂಡುಬಂದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

**ಮಳೆಗಾಲದ ಮುನ್ನೆಚ್ಚರಿಕೆ:** ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಜೆಸ್ಕಾಂ ಅಧಿಕಾರಿಗಳು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ವಿದ್ಯುತ್ ವ್ಯತ್ಯಯವಾಗದಂತೆ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು ಎಂದು ಸಚಿವರು ಸೂಚಿಸಿದರು.

**ಸಾರ್ವಜನಿಕರ ಸಹಕಾರಕ್ಕೆ ಮನವಿ:** ಪುರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳೊಂದಿಗೆ ಮಾತನಾಡಿದ ಸಚಿವರು, ಪಟ್ಟಣದಲ್ಲಿ ನೀರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲು ಸೂಚಿಸಿದರು. ಅಲ್ಲದೆ, ಪಟ್ಟಣದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳಿಗೆ ಸಾರ್ವಜನಿಕರು ಸಹಕರಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಇಇ ವೆಂಕಟೇಶ ಗಲಗ್, ಸಿರವಾರ ತಹಶೀಲ್ದಾರರಾದ ರವಿ ಅಂಗಡಿ, ತಹಶೀಲ್ದಾರ್ ಭೀಮರಾಯ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ದೊಡ್ಡಮನಿ, ಸಿರವಾರ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ್ ಸ್ವಾಮಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಿ.ಯು. ಉಡೇದ್, ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# 11 ವರ್ಷಗಳಲ್ಲಿ ಮೂಲಸೌಕರ್ಯ ಕ್ರಾಂತಿ; ಮೋದಿ

**ನವದೆಹಲಿ, ಜೂ. 11–**ಪ್ರಧಾನಿ ನರೇಂದ್ರ ಮೋದಿ ಅವರು ಮೂಲಸೌಕರ್ಯ ಕ್ರಾಂತಿಯ 11 ವರ್ಷಗಳು ಕಳೆದಿವೆ ಎಂದು ಹೇಳಿದ್ದಾರೆ ಮತ್ತು ಭಾರತದ ವೇಗವಾಗಿ ವಿಸ್ತರಿಸುತ್ತಿರುವ ಮೂಲಸೌಕರ್ಯ ಜಾಲವು ಜೀವನದ ಸುಲಭತೆಯನ್ನು ಹೆಚ್ಚಿಸುತ್ತಿದೆ ಮತ್ತು ಸಮೃದ್ಧಿಯನ್ನು ಹೆಚ್ಚಿಸುತ್ತಿದೆ ಎಂದು ಪ್ರತಿಪಾದಿಸಿದ್ದಾರೆ. ಇದು 11 ವರ್ಷಗಳ ಮೂಲಸೌಕರ್ಯ ಕ್ರಾಂತಿಯಾಗಿದೆ, ಭಾರತದ ಬೆಳವಣಿಗೆಯ ಪಥವನ್ನು ಹೆಚ್ಚಿಸಿರುವ ಅತ್ಯುತ್ತಮ ಮೂಲಸೌಕರ್ಯಗಳನ್ನು ಸೇರಿಸಲಾಗುತ್ತಿದೆ ಎಂದು ಮೋದಿ ಎಕ್ಸ್‌ನಲ್ಲಿ ಹೇಳಿದ್ದಾರೆ.

ರೈಲ್ವೆಗಳಿಂದ ಹೆದ್ದಾರಿಗಳವರೆಗೆ, ಬಂದರುಗಳಿಂದ ವಿಮಾನ ನಿಲ್ದಾಣಗಳವರೆಗೆ, ಭಾರತದ ವೇಗವಾಗಿ ವಿಸ್ತರಿಸುತ್ತಿರುವ ಮೂಲಸೌಕರ್ಯ ಜಾಲವು ಜೀವನದ ಸುಲಭತೆಯನ್ನು ಹೆಚ್ಚಿಸುತ್ತಿದೆ ಮತ್ತು ಸಮೃದ್ಧಿಯನ್ನು ಹೆಚ್ಚಿಸುತ್ತಿದೆ ಎಂದು ಅವರು ಹೇಳಿದರು. ಕಳೆದ 11 ವರ್ಷಗಳಲ್ಲಿ ನವ ಭಾರತದ ಮೂಲಸೌಕರ್ಯ ಅಭಿವೃದ್ಧಿಯನ್ನು ಎತ್ತಿ ತೋರಿಸುವ ಸರ್ಕಾರದ ನಾಗರಿಕ ತೊಡಗಿಸಿಕೊಳ್ಳುವಿಕೆ ವೇದಿಕೆಯಿಂದ ಮೋದಿ ಒಂದು ಥ್ರೆಡ್ ಅನ್ನು ಹಂಚಿಕೊಂಡಿದ್ದಾರೆ.

ಸ್ಮಾರ್ಟ್ ಸಿಟಿಗಳು. ಸುರಕ್ಷಿತ ರಸ್ತೆಗಳು. ಸುಗಮ ಪ್ರಯಾಣ– ನವಭಾರತದ ಮೂಲಸೌಕರ್ಯ ಭರವಸೆ. ಪ್ರಧಾನಿ ಅವರ ನಾಯಕತ್ವದಲ್ಲಿ ಭಾರತದ ಮೂಲಸೌಕರ್ಯವು ಭವಿಷ್ಯದತ್ತ ಧಾವಿಸುತ್ತಿದೆ ಎಂದು ಪೋಸ್ಟ್‌ಮಾಡಲಾಗಿದೆ. ಇದು ಉಕ್ಕು ಮತ್ತು ಚೈತನ್ಯ ವಿಲೀನಗೊಳ್ಳುವ ಪ್ರಯಾಣ, ಮತ್ತು ಪ್ರತಿ ಮೈಲಿಗಲ್ಲು ಶತಕೋಟಿ ಜನರ ಭರವಸೆಯನ್ನು ಹೊತ್ತಿದೆ. ದೂರವನ್ನು ಕಡಿಮೆ ಮಾಡುವ ಹೆದ್ದಾರಿಗಳು, ಸಮುದಾ




ಯಗಳನ್ನು ಒಂದುಗೂಡಿಸುವ ಸೇತುವೆಗಳು ಮತ್ತು ನಾವೀನ್ಯತೆಯನ್ನು ಹುಟ್ಟುಹಾಕುವ ಡಿಜಿಟಲ್ ನೆಟ್‌ವರ್ಕ್‌ಗಳು ಭಾರತವು ಮೂಲಸೌಕರ್ಯಕ್ಕಿಂತ ಹೆಚ್ಚಿನದನ್ನು ನಿರ್ಮಿಸುತ್ತಿದೆ. ಇದು ಆತ್ಮವಿಶ್ವಾಸ, ಸಂಪರ್ಕ ಮತ್ತು ಪ್ರತಿಯೊಬ್ಬ ಭಾರತೀಯ ಕನಸಿಗೆ ಸುಂದರವಾದ ಕ್ಯಾನ್ವಾಸ್ ಅನ್ನು ನಿರ್ಮಿಸುತ್ತಿದೆ ಎಂದು ಅದು ಹೇಳಿದೆ.

ಆವೇಗ ಬದಲಾವಣೆಯು ಕೇವಲ ಪ್ರಗತಿಯ ಬಗ್ಗೆ ಅಲ್ಲ ಇದು ಪ್ರತಿಯೊಬ್ಬ ನಾಗರಿಕನನ್ನು ಉನ್ನತೀಕರಿಸುವ ಮತ್ತು ಭಾರತದ ಭವಿಷ್ಯವನ್ನು ಪರಿವರ್ತಿಸುವ ಭರವಸೆಯ ಬಗ್ಗೆ ಎಂದು ಥ್ರೆಡ್ ಹೈಲೈಟ್ ಮಾಡಿದೆ.ಮತ್ತೊಂದು ಪೋಸ್ಟ್‌ನಲ್ಲಿ, ಮೋದಿ, ಮುಂದಿನ ಪೀಳಿಗೆಯ ಮೂಲಸೌಕರ್ಯಕ್ಕಾಗಿ ಭಾರತದ ಪ್ರಚೋದನೆಯು ಸುಸ್ಥಿರತೆ ಮತ್ತು ದೀರ್ಘಾವಧಿಯ ದೃಷ್ಟಿಕೋನದಿಂದ ನಡೆಸಲ್ಪಡುತ್ತದೆ ಎಂದು ಹೇಳಿದರು.ಇದು ಸ್ವಾವಲಂಬಿ ಭಾರತದ ಅಡಿಪಾಯವನ್ನು ಹಾಕುತ್ತಿದೆ ಎಂದು ಅವರು ಹೇಳಿದರು.

# ಹಿಂದುಳಿದ ಜಾತಿಗಳ ಒಕ್ಕೂಟದಿಂದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ

**ಹಗರಿಬೊಮ್ಮನಹಳ್ಳಿ. ಜೂ.11–** ತಾಲೂಕು ಹಿಂದುಳಿದ ಜಾತಿಗಳ ಒಕ್ಕೂಟ ಘಟಕದ ಉದ್ಘಾಟನೆಯ ಅಂಗವಾಗಿ ಬೃಹತ್ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಹಿಂದುಳಿದ ಜಾತಿಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಬುಡ್ಡಿ ಬಸವರಾಜ್ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿ ತಾಲೂಕಿನಲ್ಲಿ 25ಕ್ಕೂ ಹೆಚ್ಚು ಹಿಂದುಳಿದ ಜಾತಿಗಳನ್ನು ಒಂದುಗೂಡಿಸಿ ಸಂಘಟನೆ ಮಾಡುವ ಮೂಲಕ ಮುಖ್ಯ ವಾಹಿನಿಗೆ ತರಬೇಕಾಗಿದೆ. ಅದಕ್ಕಾಗಿ ದಿ. ಜೂ.16 ರಂದು ಸೋಮವಾರ ತಾಲೂಕು ಒಕ್ಕೂಟ ಜಾರಿಗೆ ಬರುತ್ತದೆ. ಈ ಒಂದು ಕಾರ್ಯಕ್ರಮಕ್ಕೆ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಕಾಂತರಾಜ್ ಭಾಗವಹಿಸಲಿದ್ದಾರೆ. ಅಂದು ಬೆಳಗ್ಗೆ 9:30 ರಿಂದ ಮಧ್ಯಾಹ್ನ 3ರವರೆಗೆ ಗುರುಭವನದಲ್ಲಿ ವೈದೇಹಿ ಆಸ್ಪತ್ರೆ ಬೆಂಗಳೂರು, ತಾಲೂಕ ಸಾರ್ವಜನಿಕ ಆಸ್ಪತ್ರೆ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘ ಇವರ ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ಉಚಿತ ಆರೋಗ್ಯ ಶಿಬಿರದಲ್ಲಿ ಹೃದಯ ಸಂಬಂಧಿ ಖಾಯಿಲೆಗಳು, ನರರೋಗ ಸಮಸ್ಯೆ ಎಲಬು ಕೀಲುಗಳ ತೊಂದರೆ, ಕಣ್ಣಿನ ತೊಂದರೆ ಕಿಡ್ನಿಯಲ್ಲಿ ಕಲ್ಲು ಕ್ಯಾನ್ಸರ್ ಹೀಗೆ ಇನ್ನು ಮುಂತಾದ ಖಾಯಿಲೆಗಳಿಗೆ ಉಚಿತ ತಪಾಸಣೆ ಮಾಡಲಾಗುವುದು. ಇದರ ಉಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದರು.




ಒಕ್ಕೂಟದ ತಾಲೂಕ ಅಧ್ಯಕ್ಷ ಕೆ.ಲಿಂಗರಾಜ್ ಯಾದವ್ ಮಾತನಾಡಿ ಹಿಂದುಳಿದ ಜಾತಿಗಳ ಒಕ್ಕೂಟ ಜಾರಿ ಬರುವ ಉದ್ದೇಶ ಸರ್ಕಾರದ ಯೋಜನೆಗಳು ಹಾಗೂ ಮೀಸಲಾತಿ ಸರಿಯಾದ ಕ್ರಮದಲ್ಲಿ ಬಳಕೆ ಮಾಡಿಕೊಳ್ಳುತ್ತಿಲ್ಲ. ಅವರ ಮಕ್ಕಳ ಶಿಕ್ಷಣ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ಈ ಒಂದು ಒಕ್ಕೂಟ ಕಾರ್ಯನಿರ್ವಹಿಸಲಿದೆ. ಹಿಂದುಳಿದ ಜಾತಿಗಳ ಒಕ್ಕೂಟದಲ್ಲಿ ನೂರಕ್ಕೂ ಹೆಚ್ಚು ಜನಾಂಗದವರು ಇದ್ದಾರೆ. ಆದರೆ ನಮ್ಮ ತಾಲೂಕಿನಲ್ಲಿ 25 ಹಿಂದುಳಿದ ಜಾತಿಗಳು ಕಂಡುಬರುತ್ತದೆ. ಎಲ್ಲ ಜಾತಿಗಳನ್ನು ಒಗ್ಗೂಡಿಸಿ ಸಮಾಜಮುಖಿ ಕಾರ್ಯ ಮಾಡುವ ಉದ್ದೇಶ ಇದಾಗಿದೆ ಎಂದರು. ಈ ಸಂದರ್ಭದಲ್ಲಿ ಒಕ್ಕೂಟದ ಜಿಲ್ಲಾ ಉಪಾಧ್ಯಕ್ಷ ಅನಿಲ್ ಜಾಣ, ಸಾಹುಕಾರ್ ಕೊಟ್ರೇಶ್ ಮಹೇಶ್ವರ ಸರ್ದಾರ್ ಯಮನೂರಪ್ಪ, ಈಡಿಗರ ಮಲ್ಲೇಶಪ್ಪ ಶಂಕರ್ ಮಡಿವಾಳರ ಸಂತೋಷ್, ಹನುಮಂತಪ್ಪ ಬಿ ರವಿ ಕುಮಾರ್, ಕುಂಬಾರ ರಮೇಶ್, ತಿರುಪತಿ ಇತರರಿದ್ದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**